ಸಂಪುಟ : 10 ಸಂಚಿಕೆ: 309 ಪುಟ : 4+2 ಬೆಲೆ: 3.00 ರವಿವಾರ ಜನವರಿ 25 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 309 Pages : 4+2 Price : 3.00 Sunday January 25 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಬಸವದಳದಲ್ಲಿ ಗಣರಾಜ್ಯೋತ್ಸವ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜ. 26ರಂದು ಬೆಳಿಗ್ಗೆ 8 ಗಂಟೆಗೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಗಣರಾಜ್ಯೋತ್ಸವ ಆಚರಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಶರಣ ಸಾಹಿತಿಗಳಾದ ಶರಣೆ ಗಿರಿಜಕ್ಕ ಧರ್ಮರಡ್ಡಿ ಧ್ವಜಾರೋಹಣವನ್ನು ನೆರವೇರಿಸುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಶಿವಾಜಿ ಜಯಂತ್ಯುತ್ಸವದ ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಶಿವ ರಾಮ ಕೃಷ್ಣ ಸೇವಾ ಟ್ರಸ್ಟ್ ಗದಗ ಮತ್ತು ಶ್ರೀರಾಮ ಸೇನಾ ಗದಗ ಇವರ ಸಂಯುಕ್ತಾಶ್ರಯದಲ್ಲಿ 2026ನೇ ಸಾಲಿನ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಹಾಗೂ ಶ್ರೀ ಸಂತ ಸೇವಾಲಾಲ್ ಮಹಾರಾಜರ ಜಯಂತ್ಯುತ್ಸವದ ನಿಮಿತ್ತ ಪೂರ್ವಭಾವಿ ಸಭೆಯನ್ನು ಜ. 25ರಂದು ಗದಗ ನಗರದ ಒಕ್ಕಲಗೇರಿ ಓಣೆಯ ಶ್ರೀ ರಾಯಚೋಟಿ ವೀರಭದ್ರೇಶ್ವರ ದೇವಸ್ಥಾನ ಗದಗದಲ್ಲಿ ಸಾಯಂಕಾಲ 5 ಗಂಟೆಗೆ ಕರೆಯಲಾಗಿದೆ.

ಸರ್ವ ಹಿಂದೂ ಭಾಂದವರು, ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಅಭಿಮಾನಿಗಳು, ಶ್ರೀ ಸಂತ ಸೇವಾಲಾಲರ ಅಭಿಮಾನಿಗಳು ಸಭೆಯಲ್ಲಿ ಪಾಲ್ಗೊಂಡು ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಹಿಂದೂ ಸಂಘಟನೆಯ ಮುಖಂಡ ರಾಜು ಖಾನಪ್ಪನವರ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಕ್ರಾಂತಿಸೇನಾ ವತಿಯಿಂದ ಪಂಜಿನ ಮೆರವಣಗೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ



ಅಪ್ಪಟ ದೇಶಭಕ್ತ, ದೇಶಕ್ಕಾಗಿ, ದೇಶದ ಉಳಿವಿಗಾಗಿ ಬ್ರಿಟಿಷರ ವಿರುದ್ಧ ಕೆಚ್ಚದೆಯಿಂದ ಹೋರಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಪುಣ್ಯಸ್ಮರಣೆ ನಿಮಿತ್ತ ಕ್ರಾಂತಿಸೇನಾ ಗದಗ ಜಿಲ್ಲಾ ಸಂಘಟನೆ ವತಿಯಿಂದ ಹಾಗೂ ರಾಯಣ್ಣನವರ ಅಭಿಮಾನಿಗಳಿಂದ ಜ. 26ರಂದು ಬೃಹತ್ ಪಂಜಿನ ಮೆರವಣಗೆ ಹಮ್ಮಿಕೊಳ್ಳಲಾಗಿದೆ ಎಂದು ಕ್ರಾಂತಿಸೇನಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರವೀಣ ಹಬೀಬ ತಿಳಿಸಿದ್ದಾರೆ.

ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರಂತಹ ಸಾಕಷ್ಟು ಕ್ರಾಂತಿಕಾರಿಗಳು ಈ ದೇಶಕ್ಕಾಗಿ ಸಮರ ಸಾರಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ್ದಾರೆ. ಇಂತಹ ಕ್ರಾಂತಿಕಾರಿಗಳನ್ನು ಸ್ಮರಿಸುವ, ಗೌರವಿಸುವದು ನಮ್ಮೆಲ್ಲರ ಕರ್ತವ್ಯ. ಈ ಅರ್ಥಪೂರ್ಣವಾದ ಪಂಜಿನ ಮೆರವಣಿಗೆ ಜ.26ರಂದು ಸಾಯಂಕಾಲ 6.30 ಗಂಟೆಗೆ ಗದಗ ನಗರದ ಟಾಂಗಾಕೂಟ ಸರ್ಕಲ್‌ನಿಂದ ಪ್ರಾರಂಭವಾಗಿ ಮಹೇಂದ್ರಕರ ಸರ್ಕಲ್ ಹಾಗೂ ಗಾಂಧಿ ಸರ್ಕಲ್ ಮಾರ್ಗವಾಗಿ ಗದಗ-ಬೆಟಗೇರಿ ನಗರಸಭೆ ಹತ್ತಿರ ಇರುವ ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಪುತ್ಥಳಿ ತಲುಪಲಿದೆ. ಕಾರಣ, ಸಮಸ್ತ ಹಿಂದೂ ಬಾಂಧವರು, ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಅಭಿಮಾನಿಗಳು ಹಾಗೂ ದೇಶಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗೃಹ ಮಂಡಳಿ ನಿರ್ಮಿಸಿರುವ ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

# ಕೊಳೆಗೇರಿ ಜನರೂ ಮುಖ್ಯವಾಹಿನಿಗೆ ಬರಬೇಕು



ನಮ್ಮ ಸರ್ಕಾರ ಬಂದ ಬಳಿಕ 5500 ಕೋಟಿ ರೂಪಾಯಿ ಹಣವನ್ನು ಎರಡು ವರ್ಷದಲ್ಲಿ ನಾವು, ನಮ್ಮ ಕಾಂಗ್ರೆಸ್ ಸರ್ಕಾರ ಮನೆಗಳಿಗಾಗಿ ಖರ್ಚು ಮಾಡಿದ್ದೇವೆ. ಇಷ್ಟೆಲ್ಲಾ ಆದರೂ ಸರ್ಕಾರದ ಬೊಕ್ಕಸ ಖಾಲಿ ಎಂದು ಬಿಜೆಪಿ ಸುಳ್ಳು ವದಂತಿ ಹಂಚುತ್ತಾ ತಿರುಗುತ್ತಿದೆ. ರೈತರ ಪಂಪ್‌ಸೆಟ್‌ಗಳಿಗೆ 2500 ಕೋಟಿ ರೂ ಸಬ್ಸಿಡಿ ಪ್ರತಿ ವರ್ಷ ಕೊಡುತ್ತಿದ್ದೇವೆ. ಇದರ ಜೊತೆಗೆ ವಿಧವಾ ವೇತನ, ವೃದ್ಧಾಪ್ಯ ವೇತನ ಸೇರಿ ಪ್ರತಿಯೊಂದಕ್ಕೂ ಹೇರಳವಾಗಿ ಹಣ ಬಿಡುಗಡೆ ಮಾಡುತ್ತಲೇ ಇದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕೊಳೆಗೇರಿ ಜನರೂ ಮುಖ್ಯವಾಹಿನಿಗೆ ಬರಬೇಕು. ಇದಕ್ಕಾಗಿ ಇಷ್ಟು ಬೃಹತ್ ಪ್ರಮಾಣದಲ್ಲಿ ಮನೆ ವಿತರಣೆ ಮಾಡುತ್ತಿದ್ದೇವೆ. ನಮ್ಮ ಗ್ಯಾರಂಟಿ ಯೋಜನೆಗಳು ಇರುವುದೇ ಬಡವರನ್ನು ಮುಖ್ಯವಾಹಿನಿಗೆ ತರಲು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ವಸತಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಗೃಹಮಂಡಳಿ ವತಿಯಿಂದ ಶನಿವಾರ ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗೃಹ ಮಂಡಳಿ ನಿರ್ಮಿಸಿರುವ 42,345 ಮನೆಗಳು ಹಾಗೂ ಕೊಳಗೇರಿ ಅಭಿವೃದ್ಧಿ ಮಂಡಳಿಯ 46,000 ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಿ ಅವರು ಶುಭ ಹಾರೈಸಿ ಮಾತನಾಡಿದರು.

ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗ ನಮ್ಮ ಕಾಂಗ್ರೆಸ್ ಸರ್ಕಾರ 1458000 ಮನೆಗಳನ್ನು ಕಟ್ಟಿ ಇತಿಹಾಸ ನಿರ್ಮಿಸಿ ವಸತಿ ಕ್ರಾಂತಿ ಮಾಡಿದ್ದೆವು. 2ನೇ ಬಾರಿ ಮುಖ್ಯಮಂತ್ರಿ ಆದ ಬಳಿಕ 2024ರಲ್ಲಿ 36789 ಮನೆಗಳನ್ನು ಮೊದಲನೇ ಹಂತದಲ್ಲಿ ವಿತರಿಸಿದ್ದ ನಮ್ಮ ಸರ್ಕಾರದಿಂದ 2ನೇ ಹಂತದಲ್ಲಿ 45 ಸಾವಿರ ಮನೆಗಳನ್ನು ಹಂಚುತ್ತಿದ್ದೇವೆ ಎಂದರು.

ನಾವು ಹೇಳಿದ ಎಲ್ಲವನ್ನೂ ಮಾಡಿ ನುಡಿದಂತೆ ನಡೆದಿದ್ದೇವೆ. ಅವರು ಹೇಳಿದ್ದನ್ನು ಮಾಡದೆ ನಮ್ಮ ಬಗ್ಗೆ ಸುಳ್ಳು ಹೇಳಿಕೊಂಡು ತಿರುಗುತ್ತಿದ್ದಾರೆ. ವಿದೇಶದಿಂದ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಹಾಕುತ್ತೇವೆ ಎಂದರು. ಮಹದಾಯಿ, ಕೃಷ್ಣ ಮೇಲ್ದಂಡೆ, ಭದ್ರಾ ಮೇಲ್ದಂಡೆ ಎಲ್ಲದರಲ್ಲೂ ಬಿಜೆಪಿ ಮತ್ತು ಕೇಂದ್ರ ಸರ್ಕಾರ ಮಾತು ತಪ್ಪಿದೆ. ರಾಜ್ಯದ ಜನತೆಗೆ ವಂಚಿಸಿದೆ ಎಂದು ಆರೋಪಿಸಿದರಲ್ಲದೆ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಈ ಎಲ್ಲ ಪ್ರಶ್ನೆಗಳಿಗೆ ಉತ್ತರಿಸಬೇಕು ಎಂದರು.

ಒಂದು ಮನೆಗೆ 4ರಿಂದ 5 ಲಕ್ಷ ರೂಪಾಯಿಯನ್ನು ಕೊಡುವುದು ರಾಜ್ಯ ಸರ್ಕಾರ. ಕೇಂದ್ರ ಸರ್ಕಾರ ಕೊಡುವುದು ಒಂದು ಲಕ್ಷಕ್ಕಿಂತಲೂ ಕಡಿಮೆ ಹಣ. ಆದರೆ ಹೆಸರು ಮಾತ್ರ ಪ್ರಧಾನಮಂತ್ರಿ ಆವಾಸ್ ಯೋಜನೆ. ಹಣ ನಮ್ಮದು, ರಾಜ್ಯ ಸರ್ಕಾರದ್ದು. ಹೆಸರು ಮಾತ್ರ ಕೇಂದ್ರದ್ದು ಎಂದು ಟೀಕಿಸಿದರು.

ರಾಜ್ಯಸಭೆಯ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಸತಿ ಸಚಿವರಾದ ಜಮೀರ್ ಅಹ್ಮದ್ ಖಾನ್, ಸಚಿವರುಗಳಾದ ಸತೀಶ್ ಜಾರಕಿಹೊಳಿ, ಹೆಚ್.ಸಿ. ಮಹದೇವಪ್ಪ, ಹೆಚ್.ಕೆ. ಪಾಟೀಲ್, ಕೆ.ಹೆಚ್. ಮುನಿಯಪ್ಪ, ಸಂತೋಷ್ ಲಾಡ್, ಶಾಸಕರು, ಕೊಳೆಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರೂ ಆದ ಪ್ರಸಾದ್ ಅಬ್ಬಯ್ಯ, ಪರಿಷತ್ ಸದಸ್ಯರಾದ ಬಿ.ಕೆ. ಹರಿಪ್ರಸಾದ್, ಸಲೀಂ ಅಹ್ಮದ್ ಸೇರಿದಂತೆ ಸ್ಥಳೀಯ ಶಾಸಕರು, ಜನಪ್ರತಿನಿಧಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

### ಇಟ್ಟಿಗೆರೆ ಕೆರೆ ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿದ ಶಾಸಕ ಡಾ.ಚಂದ್ರು ಲಮಾಣಿ

# ಕಾಮಗಾರಿ ಬಗ್ಗೆ ಇರುವ ದೂರುಗಳನ್ನು ಪರಿಶೀಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರಿಗೆ, ಜನ-ಜಾನುವಾರುಗಳಿಗೆ ನೀರು ಪೂರೈಸುವ ಪಟ್ಟಣದ ಇಟ್ಟಿಗೆರೆ ಕೆರೆ ಅಭಿವೃದ್ಧಿ ಕಾಮಗಾರಿ ಸ್ಥಗೀತಗೊಂಡಿರುವ ಹಿನ್ನೆಲೆಯಲ್ಲಿ ಶನಿವಾರ ಸ್ಥಳಕ್ಕೆ ಶಾಸಕ ಡಾ.ಚಂದ್ರು ಲಮಾಣಿ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು.



ಕೆರೆಯ ಅಳತೆ ಮತ್ತು ಅಲ್ಲಿ ನಡೆದಿರುವ ಕಾಮಗಾರಿಯಿಂದ ಆಗುವ ಸಮಸ್ಯೆ ಮತ್ತು ಅನೂಕೂಲತೆಗಳನ್ನು ಕುರಿತು ಅಲ್ಲಿನ ನಿವಾಸಿಗಳು, ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ಕೆರೆಯ ಸುತ್ತಲಿನ ಪ್ರದೇಶವನ್ನು ವೀಕ್ಷಿಸಿದ ಅವರು, ಕೆರೆ ಅಭಿವೃದ್ಧಿ ಕಾಮಗಾರಿಯಲ್ಲಿ ಮಣ್ಣಿನ ಬಂಡ್ ಹಾಕಿರುವದನ್ನು ಗಮನಿಸಿ, ಅದರ ಹಿಂದಿನ ಪ್ರದೇಶವು ಮತ್ತೆ ತಗ್ಗು ಪ್ರದೇಶವಾಗುವದರಿಂದ ನೀರು ನಿಲ್ಲುವ ಅಪಾಯ ತಪ್ಪಿದ್ದಲ್ಲ. ಇದರ ಬಗ್ಗೆ ಯಾರೂ ಗಮನ ಹರಿಸದಿರುವದು ವಿಷಾದನೀಯ. ಅಲ್ಲದೆ ಮೇಲಿನಿಂದ ಹರಿದು ಬರುವ ನೀರು ಹೊರಹೋಗುವ ಮಾರ್ಗವೂ ಇಲ್ಲದಿರುವುದು, ರಾಜಕಾಲುವೆ ನಿರ್ಮಾಣ ಮಾಡುವ ಬಗ್ಗೆ ಸರಿಯಾದ ನಿರ್ದೇಶನ ಇಲ್ಲದಿರುವ ಕುರಿತು ಆಕ್ಷೇಪ ವ್ಯಕ್ತಪಡಿಸಿದ ಶಾಸಕರು, ಮಣ್ಣಿನ ಬಂಡ್ ಹಾಕಿರುವ ಹಿಂದಿನ ಪ್ರದೇಶಕ್ಕೆ ಅಲ್ಲಿನ ನಿವಾಸಿಗಳು ಇಡಿ ಪ್ರದೇಶವನ್ನು ಅಷ್ಟೇ ಎತ್ತರದ ಮಣ್ಣಿನಿಂದ ತುಂಬಿಕೊಳ್ಳುವದು ಸಾಧ್ಯವೇ ಎಂದು ಪ್ರಶ್ನಿಸಿದರು.


ಈ ವೇಳೆ ಕೆಲವರು ಒಂದೆರಡು ಮನೆಗಳನ್ನು ಉಳಿಸುವ ನಿಟ್ಟಿನಲ್ಲಿ ಇಡೀ ಕೆರೆಯನ್ನು ಬಲಿ ಕೊಡಬಾರದು ಎಂದು ಒತ್ತಾಯಿಸಿದರು. ಮೇಲಿನಿಂದ ಬರುವ ನೀರು ಹರಿದು ಹೋಗಲು ಕಾಲುವೆ ನಿರ್ಮಿಸಿದರೆ ಯಾವುದೇ ತೊಂದರೆಯಾಗುವದಿಲ್ಲ. ಕೆರೆಯ ಜಾಗೆಯು ಯಾವುದೇ ರೀತಿಯಿಂದಲೂ ಅತಿಕ್ರಮಣವಾಗಿಲ್ಲ. ಇಲ್ಲಿ ವಾಸಿಸುವ ಎಲ್ಲರ ನಿವೇಶನಗಳು ಸಹ ಕಾನೂನು ಪ್ರಕಾರ ಮಾಲ್ಕಿಯದ್ದಾಗಿವೆ. ಸುತ್ತಮುತ್ತಲಿನ ನಿವೇಶನಗಳಿಗೆ ಅನೂಕೂಲವಾಗುವಂತೆ ಸುಮಾರು 3 ಎಕರೆ ಪ್ರದೇಶದಷ್ಟು ಜಾಗೆಯಲ್ಲಿ ಮಣ್ಣು ಹಾಕಿ ರಸ್ತೆ ಮಾಡಲಾಗಿದ್ದು, ಅದನ್ನು ತೆಗೆದರೆ ನೀರು ತುಂಬಿ ಕೋಡಿ ಹರಿಯುವ ಪ್ರಶ್ನೆ ಉದ್ಭವಿಸುವದಿಲ್ಲ. ಈ ಹಿಂದೆ ನೀರು ತುಂಬಿಕೊಂಡಾಗ ಇಲ್ಲಿನ ನಿವಾಸಿಗಳು ಸಾಕಷ್ಟು ತೊಂದರೆ, ನೋವು ಅನುಭವಿಸಿದ್ದೇವೆ. ಇದಕ್ಕೆ ಶಾಶ್ವತ ಪರಿಹಾರ ಕಲ್ಪಿಸಿ, ಕೆರೆಯ ಅಳತೆಯ ಪ್ರಕಾರ ಅತಿಕ್ರಮಣವಾಗಿರುವ ಜಾಗೆಯನ್ನು ತೆರವುಗೊಳಿಸಿದರೆ ಇಲ್ಲಿನ ನಿವಾಸಿಗಳ ತೊಂದರೆ ತಪ್ಪಿಸಬಹುದಾಗಿದೆ ಎಂದು ಶಂಕರ ಬ್ಯಾಡಗಿ ಹೇಳಿದರು.

ನಂತರ ಪುರಸಭೆಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಶಾಸಕರು, ಈ ಕುರಿತು ಅಧಿಕಾರಿಗಳು ಸಮಗ್ರವಾಗಿ ಪರಿಶೀಲನೆ ನಡೆಸಿ ಕಾಮಗಾರಿಯನ್ನು ಮುಂದುವರೆಸಬೇಕು. ಇಲ್ಲಿಯವರೆಗೂ ನಡೆದ ಕಾಮಗಾರಿಯ ಬಗ್ಗೆ ಮಾಹಿತಿ ನೀಡಿ, ಆಗಿರುವ ಕಾಮಗಾರಿಯ ಬಗ್ಗೆ ಇರುವ ದೂರುಗಳನ್ನು ಪರಿಶೀಲಿಸಬೇಕು ಮತ್ತು ಕೆರೆಯ ಅಳತೆಯ ಬಗ್ಗೆಯೂ ಇರುವ ದೂರುಗಳನ್ನು ಸರಿಯಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಇದು ಈ ಭಾಗದ ದೊಡ್ಡ ಮತ್ತು ಹಳೆಯ ಕೆರೆಯಾಗಿದ್ದು, ಅದನ್ನು ಅಭಿವೃದ್ಧಿಪಡಿಸಲು ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

ಈ ವೇಳೆ ಉಪವಿಭಾಗಾಧಿಕಾರಿ ಎ.ಸಿ. ಗಂಗಪ್ಪ, ತಹಸೀಲ್ದಾರ ಧನಂಜಯ ಎಂ, ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಆರೋಗ್ಯ ನೀರಿಕ್ಷಕ ಮಂಜುನಾಥ ಮುದಗಲ್ ಮುಂತಾದವರಿದ್ದರು.

### ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾಗಿ ಡಾ.ಬಸವರಾಜ ಬಳ್ಳಾರಿ ನೇಮಕ

# ನೌಕರರ ಹಿತಕ್ಷಣೆಯೇ ನನ್ನ ಮೂಲ ಮಂತ್ರ : ಡಾ.ಬಳ್ಳಾರಿ



■ವಿಜಯಸಾಕ್ಷಿ ಸುದ್ದಿ, ಗದಗ

ನೌಕರರ ಬಳಗ ನನ್ನ ಮೇಲೆ ವಿಶ್ವಾಸವಿಟ್ಟು ಜಿಲ್ಲಾಧ್ಯಕ್ಷನನ್ನಾಗಿ ಆಯ್ಕೆ ಮಾಡಿದ್ದರಿಂದಲೇ ಕಿರಿಯ ವಯಸ್ಸಿನಲ್ಲಿ ನಾನು ಕರ್ನಾಟಕ ರಾಜ್ಯ ನೌಕರರ ಸಂಘದ ಉಪಾಧ್ಯಕ್ಷನಾಗಿ ನೇಮಕಗೊಳ್ಳಲು ಕಾರಣವಾಗಿದೆ ಎಂದ ಎಂದು ಗದಗ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರು ಹಾಗೂ ರಾಜ್ಯ ನೌಕರರ ಸಂಘದ ಉಪಾಧ್ಯಕ್ಷ ಡಾ.ಬಸವರಾಜ ಬಳ್ಳಾರಿ ಸದಾ ನೌಕರರ ಹಿತರಕ್ಷಣೆಯೇ ನನ್ನ ಮೂಲ ಮಂತ್ರವಾಗಿದೆ ಎಂದರು.

ಅವರು ಕರ್ನಾಟಕ ರಾಜ್ಯ ನೌಕರರ ಸಂಘಕ್ಕೆ ರಾಜ್ಯ ಉಪಾಧ್ಯಕ್ಷರಾಗಿ ನಾಮನಿರ್ದೇಶನಗೊಂಡ ಪ್ರಮಾಣ ಪತ್ರವನ್ನು ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿಯವರಿಂದ ಸ್ವೀಕರಿಸಿದ ನಂತರ ಮಾತನಾಡಿ ನನ್ನ ಮೇಲೆ ನಂಬಿಕೆಯಿಟ್ಟು ವಹಿಸಿಕೊಟ್ಟ ಸಂಘದ ಜವಾಬ್ದಾರಿಯುನ್ನು ಯಾವುದೇ ಚ್ಯುತಿ ಬರದಂತೆ ನಿರ್ವಹಿಸುತ್ತೇನೆಂದರು.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷನಾಗಿ, ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷನಾಗಿ ನೌಕರರ ಸೇವೆ ಮಾಡಲು ಅವಕಾಶ ಮಾಡಿಕೊಟ್ಟ ರಾಜ್ಯಾಧ್ಯಕ್ಷ ಸಿಎಸ್. ಷಡಾಕ್ಷರಿ ಸೇರಿದಂತೆ ರಾಜ್ಯ ಘಟಕದ ಎಲ್ಲ ಹಿರಿ ಕಿರಿಯ ಪದಾಧಿಕಾರಿಗಳಿಗೆ, ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳಿಗೆ, ನೌಕರರ ಬಂಧುಗಳಿಗೆ ಅಭಿನಂದಿಸಿದ ಡಾ.ಬಸವರಾಜ ಬಳ್ಳಾರಿ ನೌಕರರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂಧಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ ಸೇರಿದಂತೆ ರಾಜ್ಯ ಘಟಕದ ಗೌರವ ಅಧ್ಯಕ್ಷರು, ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಪ್ರತಿಜ್ಞಾ ವಿಧಿ ಸ್ವೀಕಾರ

# ಮತದಾನ ದೇಶದ ಭವಿಷ್ಯವನ್ನು ರೂಪಿಸುತ್ತದೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿಯೊಬ್ಬರ ಮತದಾನವೂ ಅವ್ಋಉಲ್ಯವಾದ್ಋದ್ಋ. ಅದನ್ನು ಬೇಕಾಬಿಟ್ಟಿಯಾಗಿ ಚಲಾಯಿಸಬಾರದು. ತಪ್ಪು ಮತದಾನ ಅಸಮರ್ಥ ನಾಯಕನ ಆಯ್ಕೆಗೆ ಕಾರಣವಾಗುತ್ತದೆ ಎಂದು ಅಭಿವೃದ್ಧಿ ಅಧಿಕಾರಿ ಪಾರ್ವತಿ ಹೊಂಬಳ ಹೇಳಿದರು.

ಡಂಬಳ ಗ್ರಾಮದ ಸರಕಾರಿ ಉರ್ದು ಶಾಲೆಯ ಆವರಣದಲ್ಲಿ ಗದಗ ಜಿಲ್ಲಾ ಪಂಚಾಯಿತಿ, ಮುಂಡರಗಿ ತಾಲೂಕು ಪಂಚಾಯಿತಿ, ಡಂಬಳ ಗ್ರಾಮ ಪಂಚಾಯಿತಿಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಮತದಾನವನ್ನು ಪಾವಿತ್ರ್ಯತೆಗೆ ಹೋಲಿಸುತ್ತಾರೆ. ಈ ಪವಿತ್ರ ಮತಗಳನ್ನು ಅರ್ಹರಿಗೆ ಚಲಾಯಿಸಿ ಸಮರ್ಥರನ್ನು ಚುನಾಯಿಸಬೇಕು. ಮತದಾನ ನಮ್ಮ ದೇಶದ ಭವಿಷ್ಯವನ್ನು ರೂಪಿಸುತ್ತದೆ. ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುತ್ತದೆ ಎಂದು ಹೇಳಿದರು.

ವಮುಖ್ಯೋಪಾಧ್ಯಾಂರು ಡಿ.ಕೆ. ಹೊಳೆಮ್ಮನವರ, ಗ್ರಾ.ಪಂ ಕಾರ್ಯದರ್ಶಿ ಚಾಂದಮುನ್ನಿ ನೂರಭಾಷಾ ಮಾತನಾಡಿ, ಪ್ರಜೆಗಳು ದೇಶದ ಪ್ರಾಣಧಾತು ಇದ್ದಂತೆ. ಅವರು ತೆಗೆದುಕೊಳ್ಳುವ ನಿರ್ಧಾರದ ಮೇಲೆ ಆ ದೇಶದ ಮೌಲ್ಯ ನಿರ್ಣಯವಾಗುತ್ತದೆ. ಪ್ರಜಾಪ್ರಭುತ್ವದ ಗೆಲವು ಆಗಬೇಕಾದರೆ ಸಜ್ಜನರನ್ನು ಚುನಾಯಿಸುವ ಶಕ್ತಿ ಮತದಾನಕ್ಕಿದೆ ಎಂಬುದನ್ನು ದೃಢಪಡಿಸಲು ಮುಂದಾಗಬೇಕು ಎಂದು ಹೇಳಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮತದಾನದ ಕುರಿತು ಅರಿವು ಮೂಡಿಸಲಾಯಿತು. ಈ ಸಂದರ್ಭದಲ್ಲಿ ಎಸ್‌ಡಿಎಮ್‌ಸಿ ಅಧ್ಯಕ್ಷ ಎಂ.ಜೆ. ಕಾಸ್ತಾರ, ಶಿಕ್ಷಕಿಯರಾದ ಸುಸನ್ನಾ ಕನವಳ್ಳಿ, ಹಸೀನಾ ಬಸರಿ, ನುಜಹತ್ತ ಶೈಕ್, ತಸ್ಲಿಮಾ ಪಟವಾರಿ, ಗ್ರಾ.ಪಂ ಸಿಬ್ಬಂದಿಗಳಾದ ಫರಾನಾ ಸೋಟಕ್ಕನಾಳ, ಭೀಮನಗೌಡ ತಿಪ್ಪಾಪುರ, ಸರಳಾ ಯಾವಗಲ್ಲ, ಭೀಮವ್ವ ಬಂಡಿ, ಅಂಗನವಾಡಿ ಕಾರ್ಯಕರ್ತೆಯರಾದ ಎನ್. ಎಫ್. ಆನಿ, ಶೋಭಾ ಹಿರೇಮಠ, ವಿ.ಜಿ. ಬಡಿಗೇರ, ಸಾಮಕ್ಕ ನಡವಲಕೇರಿ, ಎಸ್‌ಡಿಎಂಸಿ ಸದಸ್ಯರು, ವಿದ್ಯಾರ್ಥಿಗಳು ಇದ್ದರು.




ಗ್ರಾ.ಪಂ ಕರ ವಸುಲಿಗಾರ ಯಲ್ಲಪ್ಪ ಹಾದಿಮನಿ, ಗ್ರಂಥ ಪಾಲಕರ ಅಧ್ಯಕ್ಷ ಗವಸಿದ್ದಪ್ಪ ಹಳ್ಳಾಕಾರ ಮಾತನಾಡಿ, ಮತದಾನದ ಕುರಿತು ಯುವಜನರಲ್ಲಿ ಪ್ರಜ್ಞೆ ಮೂಡಿಸಬೇಕು. ಹೊಸ ಮತದಾರರು ಮತ ಚಲಾಯಿಸುವಂತೆ ಪ್ರೇರೇಪಿಸಬೇಕು. ನಾವು ಒಬ್ಬರು ಮತ ಚಲಾಯಿಸದಿದ್ದರೆ ಏನೂ ಆಗುವದಿಲ್ಲವೆಂಬ ಉದಾಸೀನ ಬೇಡ. ಸಮರ್ಥರು ಚುನಾಯಿತಗೊಳ್ಳಲು ಮತ ಚಲಾಯಿಸಬೇಕು. ಆಸೆ ಆಮಿಷಗಳಿಗೆ ಬಲಿಯಾಗದೆ ಮತ ಹಾಕಿ ಎಂದು ಹೇಳಿದರು.



ಗದಗ ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಶರಣರ ಮಠದಲ್ಲಿ ಕುಷ್ಟಗಿಯ ಮದ್ದಾನಿ ಹಿರೇಮಠದ ಶ್ರೀ ಷ.ಬ್ರ. ಕರಿಬಸವಶಿವಾಚಾರ್ಯ ಮಹಾಸ್ವಾಮಿಗಳವರು ಷಟಸ್ಥಲ್ ಧ್ವಜಾರೋಹಣ ನೆರವೇರಿಸಿದರು. ಹಿರೇವಡ್ಡಟ್ಟಿಯ ಶ್ರೀ ಷ.ಬ್ರ. ವೀರೇಶ್ವರಶಿವಾಚಾರ್ಯ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು. ವ್ಹಿ.ಎಸ್. ಹಿರೇಮಠ ಮೊದಲಾದವರು ಉಪಸ್ಥಿತರಿದ್ದರು.



ಮುಳಗುಂದ ಪಟ್ಟಣದ ಅಂಬಿಗರ ಚೌಡಯ್ಯ ಸಮುದಾಯ ಭವನದಲ್ಲಿ ಪರಾಕ್ರಮ ದಿನಾಚರಣೆ ಅಂಗವಾಗಿ ಸುಭಾಷ ಚಂದ್ರ ಬೋಸ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ರಾಜು ಬಾರಕೇರ ಮಾತನಾಡಿದರು. ಈ ಸಂದರ್ಭದಲ್ಲಿ ಬಿ.ಜಿ. ಯಳವತ್ತಿ, ಮಾಹಾಂತೇಶ ಬಾರಕೇರ, ಮಂಜುನಾಥ ತೋಟದ, ಅಕ್ಕಮ್ಮಾ ನೀಲಗುಂದ, ಮಂಜಕ್ಕ ಕೆರಕನವರ, ಗೌರಮ್ಮಾ ಹಾಳಕೇರಿ, ಸುಜಾತಾ ನೀಲಗುಂದ, ಸುಧಾ ಕೋನಾನವರ, ರೇಖಾ ಹಾಳಕೇರಿ ಮುಂತಾದವರಿದ್ದರು.

**ಜ. 26ರಂದು ಹಿರೇಮಠ ನ್ಯಾಚರಲ್ಸ್ ಉದ್ಘಾಟನೆ, ಉಚಿತ ಆರೋಗ್ಯ ತಪಾಸಣೆ ಶಿಬಿರದ ನಿಮಿತ್ತ ಲೇಖನ**

# ಸಾಕ್ಷಾತ್ ಶ್ರೀಹರಿಯ ಸ್ವರೂಪ ಡಾ. ಮಹೇಶ ಹಿರೇಮಠ

ಭಾರತೀಯ ಸನಾತನ ಪರಂಪರೆಯಲ್ಲಿ 'ವೈದ್ಯೋ ನಾರಾಯಣೋ ಹರಿಃ' ಎಂದು ಹೇಳಲಾಗಿದೆ. ಅಂದರೆ ರೋಗಗಳನ್ನು ಗುಣಪಡಿಸುವ ತಜ್ಞ ವೈದ್ಯರು ಸಾಕ್ಷತ್ ಹರಿ ನಾರಾಯಣನ ಸ್ವರೂಪವೇ ಆಗಿರುತ್ತಾರೆ. ಇಂದಿನ ಆಧುನಿಕ ಒತ್ತಡದ ಜಂಜಾಟದ ಜೀವನ ಶೈಲಿಯಲ್ಲಿ ಬಿ.ಪಿ, ಶುಗರ್‌ನಂತಹ ಅನೇಕ ರೋಗಗಳು ಮನುಷ್ಯನನ್ನು ಜರ್ಜರಿತನನ್ನಾಗಿಸುತ್ತವೆ. ಜೀವನ ಶೈಲಿಯ ರೋಗಗಳಿಗೆ ನಿಧಾನವಾಗಿಯಾದರೂ ಸರಿ, ಶಾಶ್ವತ ಪರಿಹಾರವನ್ನು ನೀಡುವುದೇ ಆಯುರ್ವೇದ.

ಈ ರೋಗಗಳಿಂದ ಜನರನ್ನು ಮುಕ್ತರನ್ನಾಗಿಸಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವ ಗುರಿಯನ್ನು ಹೊಂದಿದವರು ಆಯುರ್ವೇದ ತಜ್ಞ ಚಿಕಿತ್ಸಕರಾದ ಡಾ. ಮಹೇಶ ಹಿರೇಮಠ ಮತ್ತು ಡಾ. ಸೌಮ್ಯಶ್ರೀ ಹಿರೇಮಠ ದಂಪತಿಗಳು. ಹಲವು ವರ್ಷಗಳಿಂದ ಗದುಗಿನ ವಿವೇಕಾನಂದ ನಗರದಲ್ಲಿರುವ ಅಕ್ಷಯ ಆಯುರ್ಧಾಮದ ಮೂಲಕ ಈ ದಂಪತಿಗಳು ಸೇವೆ ಸಲ್ಲಿಸುತ್ತಾ ಬಂದಿದ್ದಾರೆ.

ಮೂಲತಃ ಚಿಕ್ಕ ಹಂದಿಗೋಳದವರಾದ ಮಹೇಶ ಹಿರೇಮಠರು ಸುಸಂಸ್ಕೃತ ಹಿರೇಮಠ ಮನೆತನದಲ್ಲಿ 1983ರಲ್ಲಿ ಗದಿಗೆಯ್ಯ ಮತ್ತು ಗಿರಿಜಾ ದಂಪತಿಗಳ ಸುಪುತ್ರರಾಗಿ ಕೊಪ್ಪಳದಲ್ಲಿ ಜನಿಸಿದರು. ತಮ್ಮ ಆರಂಭಿಕ ಶಿಕ್ಷಣವನ್ನು ರೋಣದಲ್ಲಿ





ಪಡೆದು ಮುಂದೆ ಗದುಗಿನ ಮಾಡಲ್ ಹೈಸ್ಕೂಲ್‌ನಲ್ಲಿ ಪ್ರೌಢಶಿಕ್ಷಣ, ಜೆ.ಟಿ ಪ.ಪೂ. ಕಾಲೇಜಿನಿಂದ ಪಿಯುಸಿ ಶಿಕ್ಷಣ ಪಡೆದರು. ಆರಂಭದಿಂದಲೂ ಇವರಿಗೆ ಪಾರಂಪರಿಕ ವೈದ್ಯಕೀಯ ಪದ್ಧತಿಯಲ್ಲಿ ಅಪಾರ ಆಸಕ್ತಿ. ಇವರ ಅಜ್ಜನವರಾದ ಡಾ. ಗಂಗಾಧರಯ್ಯ ಹಿರೇಮಠರವರು ಪಾರಂಪರಿಕ ಆಯುರ್ವೇದ ತಜ್ಞರಾಗಿರುವುದು ಇವರ ಮೇಲೆ ಪ್ರಭಾವ ಬೀರಿತು. ಗದುಗಿನ ಪ್ರತಿಷ್ಠಿತ ಡಿ.ಜಿ.ಎಂ ಆರ್ಯುವೇದಿಕ್ ಮೆಡಿಕಲ್ ಕಾಲೇಜಿನಲ್ಲಿ ಬಿ.ಎ.ಎಂ.ಎಸ್ ಪದವಿಯನ್ನು ಪಡೆದು, 2010ರಲ್ಲಿ ಗದುಗಿನ ವಿವೇಕಾನಂದ ನಗರದಲ್ಲಿ ತಮ್ಮ 'ಅಕ್ಷಯ ಆಯುರ್ಧಾಮ' ಚಿಕಿತ್ಸಾಲಯವನ್ನು ಪ್ರಾರಂಭಿಸಿದರು. ಮುಂದೆ ಕಾರಟಗಿ ಹತ್ತಿರದ ಸೋಮನಾಳ ಗ್ರಾಮದವರಾದ ಆರ್ಯುವೇದದಲ್ಲಿ ಎಂ.ಡಿ ಪದವಿ ಪಡೆದ ಡಾ. ಸೌಮ್ಯಶ್ರೀಯವರನ್ನು ವಿವಾಹವಾಗಿ ದಂಪತಿಗಳಿಬ್ಬರೂ ಸೇರಿ ಜನ ಸೇವೆಯ ಕಾಯಕದಲ್ಲಿ ತೊಡಗಿದರು.

ಕಳೆದ 16 ವರ್ಷಗಳಿಂದ ಆರ್ಯುವೇದ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತ ಬಂದಿರುವ ಇವರು ಮೈಸೂರು ಸರಕಾರಿ ಆಯುರ್ವೇದ ಆಸ್ಪತ್ರೆಯಲ್ಲಿ ಕಾಯಚಿಕಿತ್ಸೆಯಲ್ಲಿ ಎಂ.ಡಿ ಪದವಿ ಪಡೆದಿರುವುದರಿಂದ ಪಂಚಕರ್ಮ ಚಿಕಿತ್ಸೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ನೀಡುತ್ತಾರೆ. ಪಾರ್ಶ್ವವಾಯು, ಚರ್ಮರೋಗ, ಸಂಧಿವಾತ, ಅಸಿಡಿಟಿ, ಕರಳು ಕಾಯಿಲೆಗಳು, ಗಾಲ್‌ಬ್ಲಾಡರ್ ಮತ್ತು ಕಿಡ್ನಿಸ್ಟೋನ್ ಮುಂತಾದ ರೋಗಗಳನ್ನು ಅಲೋಪತಿ ಪದ್ಧತಿಯನ್ನು ಅನುಸರಿಸದೇ ಶುದ್ಧವಾದ ಆಯುರ್ವೇದ ಪದ್ಧತಿಯಿಂದಲೇ ಗುಣಪಡಿಸುತ್ತಾ ಬಂದಿರುವುದು ಇವರ ಹೆಗ್ಗಳಿಕೆಯಾಗಿದೆ. ಇವರು ಸಾವಿರಾರು ರೋಗಿಗಳನ್ನು ಗುಣಮುಖರನ್ನಾಗಿ ಮಾಡಿದ್ದಾರೆ.

ತಮ್ಮ 16 ವರ್ಷಗಳ ನಿರಂತರ ವೈದ್ಯಕೀಯ ಸೇವೆಯ ಜೊತೆಗೆ ಅಧ್ಯಯನಶೀಲರೂ, ಸಂಶೋಧನಾಸಕ್ತರೂ ಆಗಿರುವ ಡಾ. ಹಿರೇಮಠರವರು ದೇಶದ ವಿವಿಧ ಪ್ರದೇಶಗಳಲ್ಲಿ ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದ ವಿವಿಧ ಆಯುರ್ವೇದ ಸಮ್ಮೇಳನಗಳಲ್ಲಿ ಉಪನ್ಯಾಸಕರಾಗಿ, ನಿರ್ಣಾಯಕರಾಗಿ ಪಾಲ್ಗೊಂಡಿದ್ದಾರೆ. ನೂರಾರು ಪ್ರಬಂಧಗಳನ್ನು ಮಂಡಿಸಿ ಜಾಗತಿಕ ಮನ್ನಣೆ ಪಡದಿದ್ದಾರೆ.

ಹೀಗೆ ನಿರಂತರವಾದ ಆರ್ಯುವೇದ ಕ್ಷೇತ್ರದ ತಮ್ಮ ಸಾಧನೆ-ಸೇವೆಗಾಗಿ ಅನೇಕ ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ. ತಮ್ಮ ಸ್ನಾತಕೋತ್ತರ ಪದವಿ ಅಧ್ಯಯನ ಸಂದರ್ಭದಲ್ಲಿಯೇ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನಿಂದ ಜಿಜ್ಞಾಸು ಸಮ್ಮೇಳನದಲ್ಲಿ ಉತ್ತಮ ಪ್ರಬಂಧ ಮಂಡಿಸಿದ್ದಕ್ಕಾಗಿ "ಜಿಜ್ಞಾಸು" ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ಯೋಗದ ಬಗೆಗೂ ವಿಶೇಷ ಪರಿಣಿತಿ ಮತ್ತು ಆಸಕ್ತಿ ಹೊಂದಿರುವ ಇವರು ಯೋಗದಲ್ಲಿ ವಿಶಿಷ್ಟ ಸಾಧನೆಗೆ 'ಯೋಗ ಪ್ರಬೋಧಿನಿ' ಪರೀಕ್ಷೆಯಲ್ಲಿ ಚಿನ್ನದ ಪದಕ ಪಡೆದಿದ್ದಾರೆ.

ಡಾ. ಮಹೇಶ ಹಿರೇಮಠರ ಮತ್ತೊಂದು ವಿಶೇಷತೆಯೆಂದರೆ, ನಾಡಿ ನೋಡಿ ಗುಣ ಪಡಿಸುವ ಅವರ ಕೌಶಲ್ಯ. ರೋಗ ನಿಧಾನ ತಂತ್ರಗಾರಿಕೆಯಲ್ಲಿ ಪಾರಂಪರಿಕ ವೈದ್ಯ ಪದ್ಧತಿಯಂತೆ ನಾಡಿ ನೋಡಿಯೇ ರೋಗದ ಗುಣಲಕ್ಷಣವನ್ನು ನಿರ್ಧರಿಸುತ್ತಾರೆ. "ವಿಶ್ವಾಸೋ ಫಲದಾಯಕ" ಎಂಬ ನುಡಿಯಂತೆ ಸದಾ ಹಸನ್ಮುಖಿಯಾಗಿ ಪ್ರೀತಿ, ಅಂತಃಕರಣ, ಕಕ್ಕುಲತೆಯಿಂದ ರೋಗಿಗಳನ್ನು ಮಾತನಾಡಿಸಿ ತಮ್ಮ ಮಾತಿನಿಂದಲೇ ಅರ್ಧ ರೋಗ, ಔಷಧಿಗಳಿಂದ ಅರ್ಧ ರೋಗ ಗುಣಮುಖಪಡಿಸುವುದು ಇವರ ವೈಶಿಷ್ಟ್ಯತೆಯಾಗಿದೆ.

ಚಿಕಿತ್ಸೆಯಲ್ಲಿ ಔಷಧದ ಸೇವನೆ ಅತ್ಯಂತ ಪ್ರಮುಖವಾಗಿರುತ್ತದೆ. ಹೀಗಾಗಿ ಡಾ. ಹಿರೇಮಠ ದಂಪತಿಗಳು ತಮ್ಮ ಕಾರ್ಯಕ್ಷೇತ್ರವನ್ನು ವಿಸ್ತರಿಸಿ ರಥ ಸಪ್ತಮಿಯ ಶುಭದಿನದಂದು 'ಹಿರೇಮಠ ನ್ಯಾಚರಲ್ಸ್' ನೈಸರ್ಗಿಕ ಆಹಾರ ಉತ್ಪನ್ನಗಳ ಘಟಕದ ಉದ್ಘಾಟನೆಯೊಂದಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಿದ್ದಾರೆ.

– ಡಾ. ಡಿ.ಎಲ್. ಪಾಟೀಲ (ಗದಗ)

## ಗುಂಪು ಹಲ್ಲೆಯ ನಂತರ ಪಾದ್ರಿ ಕುಟುಂಬ ವಾಸವಿದ್ದ ಬಾಡಿಗೆ ಮನೆ ಖಾಲಿ ಮಾಡುವಂತೆ ಒತ್ತಡ

■ ವಿಜಯಸಾಕ್ಷಿ ಸುದ್ದಿ, ಒಡಿಶಾ।

ಈ ತಿಂಗಳ ಆರಂಭದಲ್ಲಿ ಗುಂಪೊಂದು ಹಲ್ಲೆ ನಡೆಸಿ ಸಾರ್ವಜನಿಕವಾಗಿ ಅವಮಾನಿಸಿತ್ತು ಎನ್ನಲಾದ ಒಡಿಶಾ ಪಾದ್ರಿ ಕುಟುಂಬ ಎಂಟು ವರ್ಷಗಳ ಕಾಲ ವಾಸಿಸುತ್ತಿದ್ದ ಮನೆಯಿಂದ ಖಾಲಿ ಮಾಡುವಂತೆ ಒತ್ತಾಯಿಸಲಾಗಿದೆ. ಇದರಿಂದಾಗಿ ಅವರ ಕುಟುಂಬ ಭಯಭೀತರಾಗಿ ಸ್ಥಳಾಂತರಗೊಂಡಿದೆ.

ಧೆಂಕನಾಲ್ ಜಿಲ್ಲೆಯ ಪರ್ಜಂಗ್ ಪೊಲೀಸ್ ಠಾಣೆ ವ್ಯಾಪ್ತಿಯ ಕಂದಸರ್ಿಂಗ ಗ್ರಾಮದಲ್ಲಿ ಜನವರಿ 4 ರಂದು ಪಾದ್ರಿ ಬಿಪಿನ್ ಬಿಹಾರಿ ನಾಯಕ್ ಮೇಲೆ ಹಲ್ಲೆ ನಡೆಸಲಾಯಿತು. ಎಫ್‌ಐಆರ್ ಪ್ರಕಾರ, 15 ರಿಂದ 20 ಜನರ ಗುಂಪು ನಾಯಕ್ ಪ್ರಾರ್ಥನೆ ಸಲ್ಲಿಸುತ್ತಿದ್ದ ಮನೆಗೆ ಬಲವಂತವಾಗಿ ನುಗ್ಗಿ ಅವರ ಮೇಲೆ ಹಲ್ಲೆ ನಡೆಸಿತು.

ಪಾದ್ರಿಯನ್ನು ಥಳಿಸಿ, ಚಪ್ಪಲಿ ಹಾರ ಹಾಕಿ, ಗ್ರಾಮದಾದ್ಯಂತ ಮೆರವಣಿಗೆ ಮಾಡಿ, ಬಲವಂತವಾಗಿ ಕೊಳಕು ನೀರು ಕುಡಿಸಲಾಯಿತು. ಅವರ ಇಚ್ಛೆಗೆ ವಿರುದ್ಧವಾಗಿ ದೇವಾಲಯದ ಮುಂದೆ ನಮಸ್ಕರಿಸಲಾಯಿತು ಎಂದು ದೂರಿನಲ್ಲಿ ತಿಳಿಸಲಾಗಿದೆ. ನಾಯಕ್ ಅವರ ಪತ್ನಿ ಸಲ್ಲಿಸಿದ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ.

ಘಟನೆಯ ನಂತರ, ನಾಯಕ್ ಅವರು ಅಂಗುಲ್ ಜಿಲ್ಲೆಯ ತಮ್ಮ ಸ್ಥಳೀಯ ಗ್ರಾಮದಲ್ಲಿಯೇ ವಾಸಿಸುತ್ತಿದ್ದಾರೆ. ಅವರು ಮನಗೆಗೆ ಹಿಂತಿರುಗಲು ಹೆದರುತ್ತಿದ್ದಾರೆ. ಒಂದು ವಾರದೊಳಗೆ ಮನೆ ಬಾಡಿಗೆ ಮನೆ ಖಾಲಿ ಮಾಡುವಂತೆ ಮಾಲೀಕರು ಒತ್ತಾಯಿಸಿದ ಬಳಿಕ ತಮ್ಮ ಪರಿಸ್ಥಿತಿ ಹದಗೆಟ್ಟಿದೆ ಎಂದು ಅವರ ಕುಟುಂಬ ತಿಳಿಸಿದೆ.

"ನನ್ನ ಸಹೋದರ ಎಂಟು ವರ್ಷಗಳ ಕಾಲ ಯಾವುದೇ ಸಮಸ್ಯೆಯಿಲ್ಲದೆ ವಾಸಿಸುತ್ತಿದ್ದ ಮನೆಯಿಂದ ಅದರ ಮಾಲೀಕರು ಹೊರಹೋಗುವಂತೆ ಒತ್ತಡ ಹಾಕುತ್ತಿದ್ದಾರೆ; ಅನಿವಾರ್ಯವಾಗಿ ನಾವು ಅಲ್ಲಿಂದ ಹೊರಟೆವು" ಎಂದು ನಾಯಕ್ ಅವರ ಹಿರಿಯ ಸಹೋದರ ಉದಯನಾಥ್ ತಿಳಿಸಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

## ಬಂಗಾಳದಲ್ಲಿ ಎಸ್‌ಐಆರ್ ಭಯದಿಂದ 110 ಮಂದಿ ಆತ್ಮಹತ್ಯೆ : ಸಿಎಂ ಮಮತಾ ಬ್ಯಾನರ್ಜಿ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಭಯದಿಂದ ಪ್ರತಿದಿನ ಪಶ್ಚಿಮ ಬಂಗಾಳದಲ್ಲಿ ಮೂರ್ನಾಲ್ಕು ಜನರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಶುಕ್ರವಾರ (ಜ.23) ಹೇಳಿದ್ದಾರೆ. ಚುನಾವಣಾ ಆಯೋಗ ಮತ್ತು ಕೇಂದ್ರ ಸರ್ಕಾರ ಈ ಸಾವುಗಳ ಹೊಣೆ ಹೊತ್ತುಕೊಳ್ಳಬೇಕು ಎಂದಿದ್ದಾರೆ.

ಎಸ್‌ಐಆರ್ ಸಂಬಂಧಿತ ಸಾವುಗಳಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ವಿರುದ್ಧ ಏಕೆ ಎಫ್‌ಐಆರ್ ದಾಖಲಿಸಿಲ್ಲ ಎಂದು ಮಮತಾ ಬ್ಯಾನರ್ಜಿ ಪ್ರಶ್ನಿಸಿದ್ದಾರೆ. "110ಕ್ಕೂ ಹೆಚ್ಚು ಜನರು ಸಾವಿಗೀಡಾಗಿದ್ದಾರೆ. ಚುನಾವಣಾ ಆಯೋಗದ ವಿರುದ್ಧ ಏಕೆ ಪ್ರಕರಣ ದಾಖಲಿಸಿಲ್ಲ. ಭಾರತೀಯ ಚುನಾವಣಾ ಆಯೋಗ ಈ ಸಾವುಗಳ ಹೊಣೆ ಹೊರಬೇಕು, ಕೇಂದ್ರ ಸರ್ಕಾರ ಕೂಡ ಹೊಣೆ ಹೊರಬೇಕು. ರಾಜ್ಯದಲ್ಲಿ ಚುನಾವಣಾ ಆಯೋಗದ ವಿರುದ್ಧ ಜನರು ಪೊಲೀಸ್ ದೂರುಗಳನ್ನು ದಾಖಲಿಸಿರುವ ನಿದರ್ಶನಗಳಿವೆ" ಎಂದು ಕೋಲ್ಕತ್ತಾದ ರೆಡ್‌ರೋಡ್‌ನಲ್ಲಿ ನೇತಾಜಿ ಸುಭಾಶ್ ಚಂದ್ರ ಬೋಸ್ ಅವರ ಜನ್ಮದಿನದ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.



ಪಶ್ಚಿಮ ಬಂಗಾಳ ಸೇರಿದಂತೆ ದೇಶದಲ್ಲಿ ಚುನಾವಣಾ ಆಯೋಗ ಎಸ್‌ಐಆರ್ ಕೈಗೊಂಡಿರುವುದನ್ನು ಮಮತಾ ಬ್ಯಾನರ್ಜಿ ಆರಂಭದಿಂದಲೇ ವಿರೋಧಿಸುತ್ತಾ ಬಂದಿದ್ದಾರೆ. ಪಶ್ಚಿಮ ಬಂಗಾಳದಲ್ಲಿ 2025ರ ನವೆಂಬರ್ ತಿಂಗಳಲ್ಲಿ ಎಸ್‌ಐಆರ್ ಪ್ರಾರಂಭಗೊಂಡ ಬಳಿಕ, ಇದುವರೆಗೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರಿಗೆ ಮಮತಾ ಬ್ಯಾನರ್ಜಿ ಐದು ಪತ್ರಗಳನ್ನು ಬರೆದಿದ್ದಾರೆ.

ನೇತಾಜಿ ಸುಭಾಶ್ ಚಂದ್ರ ಬೋಸ್ ಏನಾದರು ಬದುಕಿದ್ದರೆ ಅವರನ್ನೂ ಎಸ್‌ಐಆರ್ ವಿಚಾರಣೆಗೆ ಕರೆಸಲಾಗುತ್ತಿತ್ತು. ರವೀಂದ್ರನಾಥ ಟ್ಯಾಗೋರ್‌ನಿಂದ ಬೋಸ್‌ವರೆಗಿನ ರಾಷ್ಟ್ರೀಯ ಐಕಾನ್‌ಗಳನ್ನು ಅಗೌರವಿಸುವ ಮತ್ತು ದೇಶದ ಇತಿಹಾಸವನ್ನು ಬದಲಾಯಿಸುವ ಪ್ರಯತ್ನಗಳು ನಡೆಯುತ್ತಿವೆ. ನಮ್ಮ ಭಾಷೆ ಮತ್ತು ಸಂಸ್ಕೃತಿಗೆ ಅಗೌರವ ತೋರಲಾಗುತ್ತಿದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

"ಕಾಂಗ್ರೆಸ್ ಪರಂಪರೆಯನ್ನು ನಂಬಿಕೊಂಡು ರಾಜಕೀಯದಲ್ಲಿರುವವರು ರಾಷ್ಟ್ರೀಯ ಐಕಾನ್‌ಗಳನ್ನು ನಡೆಸಿಕೊಳ್ಳುವ ಬಗ್ಗೆ ಯಾವುದೇ ಹೇಳಿಕೆ ನೀಡಬಾರದು" ಎಂದು ಪಶ್ಚಿಮ ಬಂಗಾಳದ ಬಿಜೆಪಿ ಅಧ್ಯಕ್ಷ ಸಮಿಕ್ ಭಟ್ಟಾಚಾರ್ಯ ಅವರಿಗೆ ಮಮತಾ ಬ್ಯಾನರ್ಜಿ ತಿರುಗೇಟು ನೀಡಿದ್ದಾರೆ.

"ವ'ಸಾಹ'ತ'ಂಶಾಹಿ ಹ್ಯಾಂಗೊವರ್" ಅನ್ನು ತೊಡೆದುಹಾಕುವ ಮೂಲಕ ಬಿಜೆಪಿ ನಿಜಕ್ಕೂ ದೇಶದ "ಇತಿಹಾಸವನ್ನು ಬದಲಾಯಿಸುತ್ತಿದೆ" ಎಂದು ಭಟ್ಟಾಚಾರ್ಯ ಈ ಹಿಂದೆ ಹೇಳಿದ್ದರು.

ಚುನಾವಣೆ ಸಮೀಪಿಸುತ್ತಿರುವ ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ರಾಜಕೀಯ ಗರಿಗೆದರಿದೆ. ಮೊದಲ ಹಂತದ ಎಸ್‌ಐಆರ್ ಪ್ರಕ್ರಿಯೆ ಬಳಿಕ, ಸುಮಾರು 58 ಲಕ್ಷ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಅಳಿಸಲಾಗಿದೆ, ಇದರಿಂದಾಗಿ ರಾಜ್ಯದಲ್ಲಿ ಮತದಾರರ ಸಂಖ್ಯೆ 7.66 ಕೋಟಿಯಿಂದ 7.08 ಕೋಟಿಗೆ ಕಡಿಮೆಯಾಗಿದೆ.

ಎಸ್‌ಐಆರ್ ಸಂಬಂಧ "ತಾರ್ಕಿಕ ವ್ಯತ್ಯಾಸಗಳ" ಹಿನ್ನೆಲೆ ಮತದಾರರಿಗೆ ನೋಟಿಸ್‌ಗಳನ್ನು ನೀಡಿರುವುದನ್ನು ವಿರೋಧಿಸಿ ಹಿಂಸಾತ್ಮಕ ಪ್ರತಿಭಟನೆಗಳು ನಡೆದಿವೆ. ಸುಮಾರು 1.36 ಕೋಟಿ ಅಂತಹ ನೋಟಿಸ್‌ಗಳನ್ನು ನೀಡಲಾಗಿದೆ ಎಂದು ವರದಿಯಾಗಿದೆ.

## ಸತ್ಸಂಗಗಳಲ್ಲಿ ಪಾಲ್ಗೊಳ್ಳುವುದರಿಂದ ಸಂಸ್ಕಾರ ವೃದ್ಧಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರಾಮಾಯಣ-ಮಹಾಭಾರತಗಳು ಭಾರತೀಯ ಸಂಸ್ಕೃತಿಯ ಎರಡು ಕಣ್ಣುಗಳಾಗಿದ್ದು, ಅವುಗಳ ಪಠಣೆ ಮತ್ತು ವಿವರಣೆಯಿಂದ ನಮ್ಮಲ್ಲಿ ಸಂಸ್ಕಾರ ಬೆಳೆಯುತ್ತದೆ. ಈ ಎರಡೂ ಮಹಾ ಕಾವ್ಯಗಳ ಸಾರವನ್ನು ಮಕ್ಕಳಿಗೆ ತಿಳಿಸಿದಲ್ಲಿ ಅವರು ಸಂಸ್ಕಾರವಂತರಾಗಿ ಬೆಳೆಯಲು ಸಾಧ್ಯ ಎಂದು ಸಾಹಿತಿ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ 116ನೇ ವರ್ಷದ ಉತ್ಸವದ 2ನೇ ದಿನ ರಾತ್ರಿ ನಡೆದ ಪಾಲಕಿ ಸೇವೆಯಲ್ಲಿ ಅವರು ಮಾತನಾಡಿದರು.

ತಂದೆ-ತಾಯಿಗಳನ್ನು ಹೇಗೆ ಗೌರವಿಸಬೇಕು, ಕೊಟ್ಟ ಮಾತಿನ ಪಾಲನೆ ಹೇಗೆ ಮಾಡಬೇಕೆಂಬುದನ್ನು ರಾಮಾಯಣ ಕಲಿಸಿದರೆ, ಸಹೋದರರು ದಾಯಾದಿಗಳಾಗಿ ಹೇಗೆ ಬಾಳಬಾರದು ಎಂಬುದನ್ನು ಮಹಾಭಾರತ ಕಲಿಸುತ್ತದೆ. ಈ ಹಿಂದೆ ಶಾಲಾ-ಕಾಲೇಜುಗಳ ಪಠ್ಯದಲ್ಲಿದ್ದಂತೆ ಇಂದಿನ ದಿನಗಳಲ್ಲಿಯೂ ರಾಮಾಯಣ-ಮಹಾಭಾರತದ ಕಥೆಗಳನ್ನು ಪಠ್ಯಗಳಲ್ಲಿ ಅಳವಡಿಸುವುದು ಅವಶ್ಯಕವಿದೆ. ಇದರಿಂದ ಮಕ್ಕಳಲ್ಲಿ ಜೀವನದ ಜ್ಞಾನ ವೃದ್ಧಿಯಾಗುತ್ತದೆ ಎಂದು ಕುಲಕರ್ಣಿ ಅಭಿಪ್ರಾಯಪಟ್ಟರು.

ಇಂದಿನ ದಿನಗಳಲ್ಲಿ ನೈತಿಕ ಮೌಲ್ಯಗಳು ಕಣ್ಮರೆಯಾಗುತ್ತಿದ್ದು, ಅವುಗಳ ಪುನರುತ್ಥಾನಕ್ಕೆ ಇಂತಹ ಮಹಾಕಾವ್ಯಗಳ ಪಠಣೆ ಅವಶ್ಯಕವಾಗಿದೆ. ಇದರೊಂದಿಗೆ ಇಂತಹ ಸತ್ಸಂಗದ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವುದರಿಂದ ಸಂಸ್ಕಾರದ ಆದರ್ಶಗಳು ಮೂಡುತ್ತವೆ ಎಂದರು.

ಅನುಪಮಾ ಗ್ರಾಮಪುರೋಹಿತ ಶ್ರೀ ಗೋಂದಾವಲೆಕರ ಮಹಾರಾಜರ ಪ್ರವಚನವನ್ನು ಓದಿದರು. ಮಹಿಳೆಯರು ಗಾಯನ ಸೇವೆಗೈದರು. ಭಕ್ತಾದಿಗಳು ಶ್ರೀ ದತ್ತ ಮಹಾರಾಜರಿಗೆ ಆರುತಿಯನ್ನು ಮಾಡಿ, ದತ್ತ ಭಜನೆ ಹಾಡಿದರು.

## ನ್ಯೂಸ್ ಲಾಂಡ್ರಿ ಸಂಪಾದಕಿ ಬಗ್ಗೆ ತಪ್ಪು ವರದಿ: ದೆಹಲಿ ಹೈಕೋರ್ಟ್ ಅಸಮಾಧಾನ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ನ್ಯೂಸ್ ಲಾಂಡ್ರಿ ವ್ಯವಸ್ಥಾಪಕ ಸಂಪಾದಕಿ ಮನೀಷಾ ಪಾಂಡೆ ಅವರ ಮಾನನಷ್ಟ ಮೊಕದ್ದಮೆಯ ವಿಚಾರಣೆಯ ಸಂದರ್ಭದಲ್ಲಿ, ಕೋರ್ಟ್‌ನ ಮೌಖಿಕ ಅವಲೋಕನಗಳ ಕುರಿತು ಕೆಲ ಮಾಧ್ಯಮಗಳ ವರದಿ ಮಾಡಿದ ರೀತಿಗೆ ದೆಹಲಿ ಹೈಕೋರ್ಟ್ ಶುಕ್ರವಾರ ಅಸಮಾಧಾನ ವ್ಯಕ್ತಪಡಿಸಿದೆ.

ನ್ಯಾಯಮೂರ್ತಿ ಸಿ. ಹರಿಶಂಕರ್ ಮತ್ತು ನ್ಯಾಯಮೂರ್ತಿ ಓಂ ಪ್ರಕಾಶ್ ಶುಕ್ಲಾ ಅವರ ವಿಭಾಗೀಯ ಪೀಠವು, ಟಿವಿ ಟುಡೇ ವಿಷಯವನ್ನು 'ಶಿಟ್' ಎಂದು ಉಲ್ಲೇಖಿಸಿ ವೀಡಿಯೊ ಕಾರ್ಯಕ್ರಮದಲ್ಲಿ ನೀಡಿದ ಹೇಳಿಕೆಗಳಿಗಾಗಿ ಪತ್ರಕರ್ತೆಯ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುವ ಉದ್ದೇಶವಿಲ್ಲ ಎಂದು ಸ್ಪಷ್ಟಪಡಿಸಿದೆ.

ಹಿಂದಿನ ದಿನದ ವಿಚಾರಣೆಯ ತನ್ನ ಹೇಳಿಕೆ ಸಂದರ್ಭದಿಂದ ಹೊರಗಿಟ್ಟು ಸಂವೇದನಾಶೀಲಗೊಳಿಸಲಾಗಿದೆ ಎಂದು ನ್ಯಾಯಾಲಯ ಹೇಳಿದೆ.

"ನಾವು ಮುಂದುವರಿಯುವ ಮೊದಲು, ನಿನ್ನೆ ವಿಚಾರಣೆಯಲ್ಲಿ, ಕೆಲವು ಬಲವಾದ ಟೀಕೆಗಳನ್ನು ಮಾಡಲಾಗಿದೆ. ಆ ಪತ್ರಕರ್ತೆ ಅಥವಾ ಅವರ ವೃತ್ತಿಜೀವನದ ವಿರುದ್ಧ ನಾವು ಕ್ರಮ ಕೈಗೊಳ್ಳುವ ಉದ್ದೇಶವನ್ನು ಹೊಂದಿಲ್ಲ. ವರದಿ ಮಾಡುವಿಕೆಯನ್ನು ಹೆಚ್ಚು ಘನತೆಯಿಂದ ಮಾಡಬಹುದಿತ್ತು" ಎಂದು ನ್ಯಾಯಮೂರ್ತಿ ಹರಿಶಂಕರ್ ಹೇಳಿದರು. ನ್ಯಾಯಾಲಯವು ಅವರ ವಿರುದ್ಧ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸ್ಪಷ್ಟಪಡಿಸಿದೆ. ಇಂಡಿಯಾ ಟುಡೇ ಮತ್ತು ಆಜ್ ತಕ್ ಒಡೆತನದ ಟಿವಿ ಟುಡೇ ಗುಂಪು ಸಲ್ಲಿಸಿದ್ದ ಮೇಲ್ಮನವಿಯನ್ನು ಪೀಠವು ವಿಚಾರಣೆ ನಡೆಸುತ್ತಿತ್ತು. ನ್ಯೂಸ್ ಲಾಂಡ್ರಿಯ ಲೇಖನದ ಮಾನನಷ್ಟ ಮತ್ತು ಅವಹೇಳನಕಾರಿ ಆರೋಪದ ಮೇಲೆ ನ್ಯೂಸ್ ಲಾಂಡ್ರಿ ಈ ಅರ್ಜಿಯನ್ನು ಸಲ್ಲಿಸಿತ್ತು.

ಗುರುವಾರದ ವಿಚಾರಣೆಯ ಸಂದರ್ಭದಲ್ಲಿ, ಟಿವಿ ಟುಡೇ ಕುರಿತ ನ್ಯೂಸ್ ಲಾಂಡ್ರಿಯ ಟೀಕೆಯು ಅತ್ಯಂತ ಸೂಕ್ಷ್ಮವಾಗಿದೆ ಎಂದು ಹೈಕೋರ್ಟ್ ಮೌಖಿಕವಾಗಿ ಗಮನಿಸಿತ್ತು. ಉಲ್ಲೇಖಿಸಲಾದ 75 ವೀಡಿಯೊಗಳಲ್ಲಿ ಒಂದು ಮಾತ್ರ ಆಕ್ಷೇಪಾರ್ಹವಾಗಿ ಕಂಡುಬಂದರೆ, ಉಳಿದವು 'ಕೇವಲ ಟೀಕೆಗಳು' ಎಂದು ಅದು ಗಮನಿಸಿತ್ತು.

ಶುಕ್ರವಾರ, ನ್ಯಾಯಾಲಯವು ತನ್ನ ಹೇಳಿಕೆಗಳ ಒಂದು ಭಾಗವನ್ನು ಹೊರತೆಗೆದು ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕವಾಗಿ ಪ್ರಸಾರ ಮಾಡಲಾಗಿದೆ ಎಂದು ಹೇಳಿದೆ.

**ಕಾಡನ್ನು ಉಳಿಸಿಕೊಳ್ಳುವ ಮಾವುತ-ಆನೆಯ ಕಥೆ**

## 'ಮಾವುತ' ಚಿತ್ರದ ಟ್ರೈಲರ್ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲಕ್ಷ್ಮೀಪತಿ ಬಾಲಾಜಿ ನಿರ್ಮಿಸಿ, ನಾಯಕನಾಗಿ ನಟಿಸಿರುವ 2ನೇ ಚಿತ್ರ 'ಮಾವುತ'ದ ಟ್ರೈಲರ್ ಬಿಡುಗಡೆ ಸಮಾರಂಭ ರೇಣುಕಾಂಬ ಸ್ಟುಡಿಯೋದಲ್ಲಿ ನೆರವೇರಿತು.

ಡಿ.ಸಿ.ಪಿ (ದೆಹಲಿ)ಶಂಕರ್ ಬಿ, ಬಿ.ಜೆ.ಪಿ ಮುಖಂಡರಾದ ಕವಿತಾ ಸಿಂಗ್, ನಿವೃತ್ತ ಪೊಲೀಸ್ ಅಧಿಕಾರಿ ನಂಜುಂಡಸ್ವಾಮಿ, ಸಮಾಜ ಸೇವಕರಾದ ಭಜರಂಗಿ ಉಮೇಶ್ ಮುಂತಾದವರು ಅತಿಥಿಗಳಾಗಿ ಆಗಮಿಸಿದ್ದರು. 'ಮಾವುತ' ಕಾಡಿನಲ್ಲಿ ನಡೆಯುವ ಕೆಲವು ಅಕ್ರಮಗಳನ್ನು ಪತ್ತೆ ಮಾಡಿ, ಕಾಡನ್ನು ಉಳಿಸಿಕೊಳ್ಳುವ ಮಾವುತ ಹಾಗೂ ಆನೆಯ ಕಥೆಯಾಗಿದೆ. ಲಕ್ಷ್ಮೀಪತಿ ಬಾಲಾಜಿ ಅವರು ಈ ಚಿತ್ರವನ್ನು ನಿರ್ಮಾಣ ಮಾಡುವುದರ ಜೊತೆಗೆ ನಾಯಕನಾಗಿಯೂ ನಟಿಸಿದ್ದಾರೆ ಎಂದು ನಿರ್ದೇಶಕ ರವಿಶಂಕರ್



ನಾಗ್ ತಿಳಿಸಿದರು.

ನಾಯಕಿಯರಾದ ಮಹಾಲಕ್ಷ್ಮಿ, ದಿವ್ಯಶ್ರೀ, ನಟರಾದ ಲಯ ಕೋಕಿಲ, ಕೈಲಾಶ್ ಕುಟ್ಟಪ್ಪ, ಹಿನ್ನೆಲೆ ಸಂಗೀತ ನೀಡಿರುವ ರವಿವರ್ಮ ಹಾಗೂ ಸಿರಿ ಮ್ಯೂಸಿಕ್‌ನ ಚಿಕ್ಕಣ್ಣ ಮುಂತಾದವರು ಚಿತ್ರದ ಕುರಿತು ಮಾತನಾಡಿದರು.

ಸಹ ನಿರ್ಮಾಪಕರಾಗಿ ಮುರುಳಿಧರ ತಿಪ್ಪುರ್, ಚಲುವರಾಜ್ ಎನ್ ಅವರು ಸಾಥ್ ಕೊಟ್ಟಿದ್ದಾರೆ.

ರವಿ ಶಂಕರನಾಗ್ ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ನಿರ್ದೇಶನದ ಹೊಣೆ ಹೊತ್ತಿದ್ದಾರೆ. ಛಾಯಾಗ್ರಹಣ ವೀನಸ್ ಮೂರ್ತಿ, ವಿನು ಮನಸು ಸಂಗೀತ, ರವಿವರ್ಮ ಹಿನ್ನೆಲೆ ಸಂಗೀತ, ವೆಂಕಿ ಯುಡಿವಿ ಸಂಕಲನ, ಕಮಲ್ ಗೋಯಲ್ ಡಿಐ, ಅಕ್ಷಯ್ ಅವರ ಸಿಜಿ ಕಾರ್ಯ, ಥ್ರಿಲ್ಲರ್ ಮಂಜು ಸಾಹಸ, ಪಿಆರ್‌ಓ ಸುಧೀಂದ್ರ ವೆಂಕಟೇಶ, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಅವರಾಗಿದ್ದಾರೆ. ತಾರಾಬಳಗದಲ್ಲಿ ಲಕ್ಷ್ಮೀಪತಿ ಬಾಲಾಜಿ, ಮಹಾಲಕ್ಷ್ಮಿ, ದಿವ್ಯಶ್ರೀ, ಥ್ರಿಲರ್ ಮಂಜು, ಪದ್ಮಾ ವಾಸಂತಿ, ಬಲರಾಜ್‌ವಾಡಿ, ಲಯ ಕೋಕಿಲ, ನಂಜು ಸಿದ್ದಪ್ಪ, ಕೈಲಾಶ್ ಕುಟ್ಟಪ್ಪ, ಮೈಸೂರ್ ಸುಂದರ್, ಮೈಸೂರ್ ಮಂಜುಳ ಮೊದಲಾದವರು ಅಭಿನಯಿಸಿದ್ದಾರೆ.

ಸಾಗರ್ ಎಂಬ ಆನೆ ಚಿತ್ರದಲ್ಲಿ ಅಮೋಘವಾಗಿ ಅಭಿನಯಿಸಿದೆ. ಅನೇಕ ಬಾರಿ ಅಂಬಾರಿ ಹೊತ್ತು, ಈಗ ನಮ್ಮೊಡನೆ ಇರದ ಅರ್ಜುನನೇ ಸ್ಫೂರ್ತಿ.

ನಮ್ಮ ಈ ಚಿತ್ರ ಅರ್ಜುನನಿಗೆ ಅರ್ಪಣೆ. ಸದ್ಯದಲ್ಲೇ ಚಿತ್ರ ತೆರೆಗೆ ಬರಲಿದೆ ಎಂದರು ಲಕ್ಷ್ಮೀಪತಿ ಬಾಲಾಜಿ. ಸಾಹಸ ಸಂಯೋಜನೆಯ ಜೊತೆಗೆ ಪ್ರಮುಖ ಪಾತ್ರದಲ್ಲಿ ಅಭಿನಯ ಕೂಡ ಮಾಡಿದ್ದೇನೆ ಎಂದು ಥ್ರಿಲ್ಲರ್ ಮಂಜು ತಿಳಿಸಿದರು.

## ಹಿಂದೂ ಸಮಾವೇಶದ ನಿಮಿತ್ತ ವಿಜೃಂಭಣೆಯಿಂದ ನಡೆದ ಶೋಭಾಯಾತ್ರೆ

# ದೇಶದ ಉದ್ಧಾರಕ್ಕೆ ಕಂಕಣಬದ್ಧರಾಗೋಣ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಹಿಂದೂ ಸಮ್ಮೇಳನ ಸಮಿತಿಯ ವತಿಯಿಂದ ಶನಿವಾರ ಪಟ್ಟಣದಲ್ಲಿ ನಡೆದ ಹಿಂದೂ ಸಮಾವೇಶಕ್ಕೂ ಮುಂಚೆ ನಡೆದ ಶೋಭಾಯಾತ್ರೆಯು ಅತ್ಯಂತ ವಿಜೃಂಭಣೆಯಿಂದ ಜರುಗಿತು.

ಕೊಂತಿ ಮಲ್ಲಪ್ಪನ ದೇವಸ್ಥಾನದ ಎದುರು ಬೃಹತ್ ಶೋಭಾ ಯಾತ್ರೆಗೆ ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು. ನರೇಗಲ್ಲ ಹೋಬಳಿಯ 21 ಗ್ರಾಮಗಳಿಂದ ಆಗಮಿಸಿದ್ದ ಎಲ್ಲ ಹಿಂದೂಗಳು ಈ ಶೋಭಾಯಾತ್ರೆಯಲ್ಲಿ ಪಾಲ್ಗೊಂಡು ಯಾತ್ರೆಗೆ ವಿಶೇಷ ಮೆರುಗು ನೀಡಿದರು.

ಗೊಂಬೆ ಕುಣಿತ, ಹನುಮಂತನ ವೇಷ, ಮಹಿಳೆಯರ ಡೊಳ್ಳು, ಜಾಂಜ್ ಮೇಳ ಮುಂತಾದವುಗಳು ಮೆರವಣಿಗೆಯ ಆಕರ್ಷಣೆ ಹೆಚ್ಚಿಸಿದ್ದವು. ಮಹಿಳೆಯರು ಮತ್ತು ಮಕ್ಕಳು ವಿವಿಧ ವೇಷಭೂಷಣಗಳನ್ನು ತೊಟ್ಟು ಮೆರವಣಿಗೆಯುದ್ದಕ್ಕೂ ಸಾಗಿದರು. ಅದರಲ್ಲಿ ರಾಮ, ಲಕ್ಷ್ಮಣ, ಸೀತೆ, ಹನುಮಂತ, ಇತ್ಯಾದಿ ಮಹಾನುಭಾವರ ವೇಷಭೂಷಣಗಳು, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರುಗಳ ವೇಷಭೂಷಣಗಳಿದ್ದವು. ಶೋಭಾಯಾತ್ರೆ ಸಾಗಿದ ರಸ್ತೆಯುದ್ದಕ್ಕೂ ನೆರೆದು ಯಾತ್ರೆ ನೋಡುತ್ತಿದ್ದ ಜನರಲ್ಲಿ ಆಧ್ಯಾತ್ಮಿಕದ ಅಲೆ, ದೇಶ ಭಕ್ತಿಯ ಅಲೆಯನ್ನೇ ಎಬ್ಬಿಸಿದವು.

> ಕೊಂತಿ ಮಲ್ಲಪ್ಪನ ಗುಡಿಯಿಂದ ಪ್ರಾರಂಭವಾದ ಶೋಭಾಯಾತ್ರೆಯು ಶ್ರೀ ದ್ಯಾಮವ್ವ-ಶ್ರೀ ವೀರಭದ್ರ ದೇವಸ್ಥಾನ, ಶ್ರೀ ವಿನಾಯಕ ದೇವಸ್ಥಾನ ಮೂಲಕ ಸಂತೆ ಬಜಾರ, ಹಳೆ ಬಸ್ ನಿಲ್ದಾಣ, ಪಟ್ಟಣದ ಮುಖ್ಯ ಬೀದಿ, ಹೊಸ ಬಸ್ ನಿಲ್ದಾಣದ ಮೂಲಕ ಸಮಾರಂಭದ ಮುಖ್ಯ ವೇದಿಕೆ ಹಿರೇಮಠದ ಮುಖ್ಯ ವೇದಿಕೆಗೆ ಬಂದು ತಲುಪಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲಿಕಾರ್ಜುನ ಶಿವಾಚಾರ್ಯರು, ನಾವೆಲ್ಲ ಹಿಂದೂ, ನಾವೆಲ್ಲ ಒಂದು ಎನ್ನುವ ಭಾವನೆ ಎಂದಿಗೂ ನಮ್ಮಲ್ಲಿರಬೇಕು. ನಮ್ಮ ನಮ್ಮ ನಡುವಿನ ಚಿಕ್ಕಪುಟ್ಟ ಭಿನ್ನಾಭಿಪ್ರಾಯಗಳನ್ನು ತೊಡೆದು ಹಾಕಿ ನಾವು ದೇಶದ ಉದ್ಧಾರಕ್ಕೆ ಕಂಕಣಬದ್ಧರಾಗಬೇಕು. ಶಕ್ತಿಶಾಲಿ ದೇಶವನ್ನು ಕಟ್ಟಲು ಮುಂದಾಗಬೇಕು. ನಮ್ಮ ಮಕ್ಕಳಲ್ಲಿ ದೇಶದ ಬಗ್ಗೆ ಪ್ರೀತಿಯನ್ನು ಹುಟ್ಟಿಸುವುದರ ಜೊತೆಗೆ, ಅವರಲ್ಲಿ ಆಧ್ಯಾತ್ಮಿಕ ಅರಿವನ್ನೂ, ಸಂಸ್ಕೃತಿಯನ್ನೂ ಬಿತ್ತಬೇಕು. ನಮ್ಮ ಮಕ್ಕಳಲ್ಲಿ ಅಂತಹ ಗುಣಗಳು ಇಂತಹ ಸಮ್ಮೇಳನಗಳಿಂದ ಬರುತ್ತವೆ. ಅದಕ್ಕಾಗಿ ಎಲ್ಲಿಯಾದರೂ ಇಂತಹ ಸಮ್ಮೇಳನಗಳು ನಡೆದರೆ ಅದರಲ್ಲಿ ನಿಮ್ಮ ಮಕ್ಕಳೊಂದಿಗೆ ಪಾಲ್ಗೊಳ್ಳಿ. ಇಂದು ಇಲ್ಲಿ ನೆರೆದಿರುವ ಹಿಂದೂ ಸಮಾಜದ ಜನವನ್ನು ಕಂಡು ಸಂತಸವಾಗಿದೆ ಎಂದರು.



ಖವೈಎಸ್‌ಪಿ ಪ್ರಭುಗೌಡ ಕಿರೇದಳ್ಳಿ ಮಾರ್ಗದರ್ಶನದಲ್ಲಿ ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ ಮತ್ತು ಸಿಬ್ಬಂದಿಗಳು ನಿರ್ದೇನದಂತೆ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು. ಈ ಸಂದರ್ಭದಲ್ಲಿ ಗಜೇಂದ್ರಗಡ ಪಿಎಸ್‌ಐ ಡಿ. ಪ್ರಕಾಶ, ರೋಣ ಪಿಎಸ್‌ಐ ಪ್ರಕಾಶ ಬಣಕಾರ, ಅಪರಾಧ ವಿಭಾಗದ ಪಿಎಸ್‌ಐ ಚವಡಿ ಬೀರಣ್ಣ ಅವರ ಜೊತೆಗೆ ರೋಣ, ಗಜೇಂದ್ರಗಡ, ಮುಂಡರಗಿ, ನರಗುಂದ ಠಾಣಾ ಸಿಬ್ಬಂದಿಗಳು ಇದ್ದರು.



ಬೆಟಗೇರಿಯ ಶ್ರೀ ರಂಗಪ್ಪಜ್ಜನ ಮಠದಲ್ಲಿ 97ನೇ ಜೋಡು ರಥೋತ್ಸವದ ಅಂಗವಾಗಿ 4ನೇ ದಿನದ ಪ್ರಸಾದ ವಿತರಣೆ ಕಾರ್ಯಕ್ರಮದಲ್ಲಿ ಸಾವಿರಾರು ಸದ್ಭಕ್ತರು ಪ್ರಸಾದ ಸ್ವೀಕರಿಸಿದರು.

## ವಾರ್ಷಿಕ ಸ್ನೇಹ ಸಮ್ಮೇಳನ ನಾಳೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಬಿ.ಸಿ. ಬಂಗಾರಿ ಪೂರ್ವ ಪ್ರಾಥಮಿಕ, ಅನುದಾನಿತ ಪ್ರಾಥಮಿಕ ಶಾಲೆಯ ಪ್ರಜಾರಾಜ್ಯೋತ್ಸವ, ವಾರ್ಷಿಕೋತ್ಸವ, ಪಾಲಕರ ದಿನಾಚರಣೆಯನ್ನು ಜ. 26ರಂದು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 7.30ಕ್ಕೆ ಪ್ರಜಾ ರಾಜೋತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸುವರು. ಮುಖ್ಯ ಅತಿಥಿಗಳಾಗಿ ಬಿ.ಬಿ. ಗೌಡರ ಪಾಲ್ಗೊಳ್ಳುವರು. ಸಾಯಂಕಾಲ 4 ಗಂಟೆಗೆ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ನೇತೃತ್ವವನ್ನು ಧಾರವಾಡ ಮುರುಘಾಮಠ, ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಎಸ್.ಸಿ. ಬಡ್ನಿ, ಮುಖ್ಯ ಅತಿಥಿಗಳಾಗಿ ಟಿ.ಈಶ್ವರ, ಷಣ್ಮುಖ ಸಿರಹಟ್ಟಿ, ಮುಖ್ಯಾಧ್ಯಾಪಕಿ ವಾಯ್.ಎಸ್. ಶಂಕಿನ, ಎ.ಎಸ್. ಬೇಲೇರಿ, ಪರಶುರಾಮ ವಂಟಕರ, ಸಂಜಯ ನೀಲಗುಂದ, ಶಿವಬಸವ ಹಸಬಿ, ಮಾಹಾಂತೇಶ ಕೋರಿ, ನಾಗರಾಜ ನೀಲಗುಂದ, ಹೊನ್ನಪ್ಪ ನೀಲಗುಂದ, ಬಸವರಾಜ ಬಾತಾಖಾನಿ, ಹರ್ಷಾಲಾ ದೇಶಪಾಂಡೆ, ಅನ್ನಪೂರ್ಣಾ ಬಡ್ನಿ, ಮಂಜುಳಾ ಬಂಗಾರಿ ಭಾಗವಹಿಸುವರು ಎಂದು ಮುಖ್ಯಾಧ್ಯಾಪಕ ಎ.ಎಸ್. ಬೇಲೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗುತ್ತಿಗೆ ಪೌರಕಾರ್ಮಿಕರ ಮರುನೇಮಕಕ್ಕೆ ಒತ್ತಾಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪುರಸಭೆಯ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಪೌರಕಾರ್ಮಿಕರನ್ನು ಕೆಲಸದಿಂದ ತೆಗೆದಿದ್ದು, ಪುನಃ ನೇಮಿಸಿಕೊಳ್ಳಬೇಕು ಎಂದು ಗುತ್ತಿಗೆ ಕಾರ್ಮಿಕರು ಶನಿವಾರ ಆಡಳಿತಾಧಿಕಾರಿ ಹಾಗೂ ಗದಗ ಜಿಲ್ಲಾ ಉಪವಿಭಾಗಾಧಿಕಾರಿ ಎ.ಸಿ ಗಂಗಪ್ಪ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಗುತ್ತಿಗೆದಾರ ಪೌರಕಾರ್ಮಿಕರರು ಮಾತನಾಡಿ, ಕಳೆದ 10 ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ನ್ಯಾಯ ಸಿಗುತ್ತಿಲ್ಲ. ಕಳೆದ ಮಾರ್ಚ್‌ನಿಂದ ನಾಲ್ಕು ತಿಂಗಳು ಕಾರ್ಯನಿರ್ವಹಿಸಿದ್ದಾರೆ. ಅದರಲ್ಲಿ ಗುತ್ತಿಗದಾರರ 2 ತಿಂಗಳ ಗೌರವಧನ ಕೊಟ್ಟು ಇನ್ನು ಎರಡು ತಿಂಗಳು ಗೌರವಧನ ಕೊಟ್ಟಿಲ್ಲ. 10 ಜನರಲ್ಲಿ 6 ಜನರನ್ನು ತೆಗೆದು-ಕೊಂಡಿದ್ದು, ನಾಲ್ಕು ಜನರನ್ನು ಕೆಲಸದಿಂದ ತಗೆದುಹಾಕಿದ್ದಾರೆ. ಈ ಎಲ್ಲರನ್ನೂ ಮತ್ತೆ ಕೆಲಸಕ್ಕೆ ಸೇರಿಸಿಕೊಂಡಲ್ಲಿ ಜೀವನ ನಿರ್ವಹಣೆಗೆ ಅನುಕೂಲವಾಗುತ್ತದೆ ಎಂದು ವಿನಂತಿಸಿದರು.

ಪುರಸಭೆ ಮಾಜಿ ಉಪಾಧ್ಯಕ್ಷ ರಾಮಪ್ಪ ಗಡದವರ ಹಾಗೂ ಪೌರಕಾರ್ಮಿಕರ ಸಂಘದ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿರುವ 10 ಜನರನ್ನು ನೇಮಿಸಿಕೊಳ್ಳಲು ಆಡಳಿತ ಮಂಡಳಿಯು ಠರಾವು ಮಾಡಿದ್ದು, ಅವರಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಇರುವ ಸಮಸ್ಯೆಗಳನ್ನು ಬಗೆಹರಿಸಿ ಕೂಡಲೇ ಅನುಕೂಲತೆ ಕಲ್ಪಿಸಿಕೊಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗುತ್ತಿಗೆ ಪೌರಕಾರ್ಮಿಕರಾದ ಕಲ್ಯಾಣಕುಮಾರ ಹಾದಿಮನಿ, ಅಭಿಜಿತ್ ನಂದೆಣ್ಣವರ, ರಾಮಪ್ಪ ಅಯ್ಯಣ್ಣವರ, ನೀಲಪ್ಪ ಶಿರಹಟ್ಟಿ, ಪರಮೇಶ ಗಡದವರ, ಅರುಣ ನಂದೆಣ್ಣವರ, ಹೊನ್ನಪ್ಪ ಮೇಗಲಮನಿ, ಪ್ರಕಾಶ ಗಡದವರ, ಮಂಜುನಾಥ ದೊಡ್ಡಮನಿ, ನೀಲಪ್ಪ ಭಜಕ್ಕನವರ ಸೇರಿದಂತೆ ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಹನುಮಂತ ನಂದೆಣ್ಣವರ ಮುಂತಾದವರಿದ್ದರು.

## ಸಂಭ್ರಮದ ಮಕರ ಸಂಕ್ರಾಂತಿ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸರಾಫ್ ಬಝಾರ್ ಅಂಬಾಭವಾನಿ ದೇವಸ್ಥಾನದಲ್ಲಿ ಮಕರ ಸಂಕ್ರಮಣವನ್ನು ಸಂಭ್ರಮದಿಂದ ಆಚರಿಸಲಾಯಿತು.

ತ್ರಿಷಾ ವೆಂಕಟೇಶ್ ಬಾಕಳೆ ನೃತ್ಯದೊಂದಿಗೆ ಪ್ರಾರಂಭವಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಫಾರ್ಮಸಿಸ್ಟ್ ಗೀತಾ ಕಲಬುರ್ಗಿ ಆಗಮಿಸಿದ್ದರು.

ಬೆಟಗೇರಿ ಮಹಿಳಾ ಮಂಡಳದ ಅಧ್ಯಕ್ಷೆ ಸರೋಜ ಎಚ್.ಕಬಾಡಿ ಮಾತನಾಡಿ, ಸೂರ್ಯದೇವನ ಪಥ ಸಂಚಲನೆ, ಎಳ್ಳು-ಬೆಲ್ಲ ಬೀರುವ ಮಹತ್ವವನ್ನು ತಿಳಿಸಿದರು. ಮಾಜಿ ಅಧ್ಯಕ್ಷೆ ಸರೋಜಾಬಾಯಿ ಟಿಕಂದಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಎರಡು ವರ್ಷಕ್ಕೊಮ್ಮೆ ಬದಲಾವಣೆಯಾಗುವ ಅಧ್ಯಕ್ಷ ಸ್ಥಾನಕ್ಕೆ ಮಹಿಳಾ ಮಂಡಲದ ಉಪಾಧ್ಯಕ್ಷೆ ಸ್ನೇಹಲತಾ ಕಬಾಡಿಯವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಅಧಕ್ಷೆ ಉಮಾಬಾಯಿ ಎಸ್.ಬೇವಿನಕಟ್ಟಿ ಎರಡು ವರ್ಷ ತಾವು ಮಾಡಿದ ಕಾರ್ಯಕ್ರಮಗಳ ವಿವರಣೆ ನೀಡಿದರು.

ಕಾರ್ಯದರ್ಶಿ ರೇಖಾಬಾಯಿ ಬೇವಿನಕಟ್ಟಿ ಮತ್ತು ಖಜಾಂಚಿ ಕಸ್ತೂರಬಾಯಿ ಭಾಂಡಗೆ, ಸಹ ಕಾರ್ಯದರ್ಶಿ ಗೀತಾ ಹಬೀಬ ವೇದಿಕೆಯಲ್ಲಿದ್ದರು. ಲಲಿತಾಬಾಯಿ ಬಾಕಳೆ ಪ್ರಾರ್ಥಿಸಿದರು. ರತ್ನಾಬಾಯಿ ಹಬೀಬ ಸ್ವಾಗತಿಸಿದರೆ, ರೇಖಾಬಾಯಿ ಖಟವಟೆ ಕಾರ್ಯಕ್ರಮ ನಿರೂಪಿಸಿದರು. ಹೇಮಾ ಬೇವಿನಕಟ್ಟಿ ವಂದಿಸಿದರು.

ಮಹಿಳಾ ಮಂಡಳದ ಸದಸ್ಯರಾದ ಗೀತಬಾಯಿ ಭಾಂಡಗೆ, ಲಕ್ಷ್ಮೀ ಆರ್.ಖಟವಟೆ, ಸುನಂದಾಬಾಯಿ ಕೆ.ಹಬೀಬ, ಅಂಬೂಬಾಯಿ ಬೇವಿನಕಟ್ಟಿ, ಅನ್ನಪೂರ್ಣ ಶಿದ್ಲಿಂಗ್, ಶಾಂತಾಬಾಯಿ ಬಾಕಳೆ, ಶೋಭಾ ಭಾಂಡಗೆ, ಲಕ್ಷ್ಮೀ ಎಂ.ಖಟವಟೆ, ಭಾವನಾ ಭಾಂಡಗೆ, ಸುನಂದಾಬಾಯಿ ಎಸ್.ಹಬೀಬ್, ಪದ್ಮಾ ಕಬಾಡಿ, ನೀತಾ ಹಬೀಬ, ವಂದನಾ ವಿ.ಶಿದ್ಲಿಂಗ್ ಉಪಸ್ಥಿತರಿದ್ದರು.

## ಲಂಚ ಪ್ರಕರಣ : ಅದಾನಿಗೆ ಸಮನ್ಸ್ ತಲುಪಿಸಲು ಎರಡು ಬಾರಿ ನಿರಾಕರಿಸಿದ ಕೇಂದ್ರ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಅಮೆರಿಕದ ಸೆಕ್ಯುರಿಟೀಸ್ ಆ್ಯಂಡ್ ಎಕ್ಸ್‌ಚೇಂಜ್ ಕಮಿಷನ್ (ಎಸ್‌ಇಸಿ) ಗೌತಮ್ ಅದಾನಿ ಮತ್ತು ಅವರ ಸೋದರಳಿಯ ಸಾಗರ್ ಅದಾನಿ ಅವರಿಗೆ ಕಾನೂನು ಸಮನ್ಸ್ ಕಳುಹಿಸಿತ್ತು. ಆದರೆ, ಭಾರತದ ಕಾನೂನು ಮತ್ತು ನ್ಯಾಯ ಸಚಿವಾಲಯ ಈ ಸಮನ್ಸ್‌ಗಳನ್ನು ಅಧಿಕೃತವಾಗಿ ಅದಾನಿ ಅವರಿಗೆ ತಲುಪಿಸಲು ಎರಡು ಬಾರಿ ನಿರಾಕರಿಸಿದೆ ಎಂದು ವರದಿಯಾಗಿದೆ.

ಸಮನ್ಸ್‌ಗಳಲ್ಲಿ ತಾಂತ್ರಿಕ ದೋಷಗಳಿದ್ದವು. ಅಂದರೆ, ಅದರ ಮೇಲೆ ಅಗತ್ಯವಾದ ಅಧಿಕೃತ ಸೀಲ್ ಮತ್ತು ಇಂಕ್ ಸಹಿ ಮುಂತಾದವು ಸರಿಯಾಗಿ ಇರಲಿಲ್ಲ ಎಂದು ಸರ್ಕಾರ ಜಾರಿಕೊಂಡಿದೆ ಎಂದು ವರದಿ ಹೇಳಿದೆ.

ವರದಿಗಳ ಪ್ರಕಾರ, ಕಳೆದ ವರ್ಷ (2025ರಲ್ಲಿ) ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯವು ಎಸ್‌ಇಸಿ ಕಳುಹಿಸಿದ ಕವರ್ ಲೆಟರ್‌ನಲ್ಲಿ ಇಂಕ್ ಸಹಿ, ಅಗತ್ಯ ಫಾರ್ಮ್‌ಗಳ ಮೇಲೆ ಅಧಿಕೃತ ಸೀಲ್ ಇಲ್ಲದಿರುವುದನ್ನು ಮತ್ತು ಸಮನ್ಸ್ ತಲುಪಿಸುವ ವಿಧಾನಕ್ಕೆ ಸಂಬಂಧಿಸಿದ ಪ್ರಕ್ರಿಯಾ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಎರಡು ಬಾರಿ ಸಮನ್ಸ್‌ಗಳನ್ನು ಅಧಿಕೃತವಾಗಿ ಅದಾನಿಗೆ ನೀಡಲು ನಿರಾಕರಿಸಿದೆ.

ಎರಡು ಭಾರತ ಸರ್ಕಾರ ಸಮನ್ಸ್ ತಲುಪಿಸಲು ನಿರಾಕರಿಸಿದ ಕಾರಣ ಎಸ್‌ಇಸಿಗೆ ಹೇಗ್ ಕನ್ವೆನ್ಷನ್ ಮೂಲಕ ಸಮನ್ಸ್ ತಲುಪಿಸುವುದು ಕಷ್ಟವಾಗಿದೆ.

## ರೈತಪರ ಚಿಂತನೆಯೊಂದಿಗೆ ಸಂಘವನ್ನು ಮುನ್ನಡೆಸಿ



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಸಹಕಾರಿ ಸಂಘಗಳು ರೈತರ ಆರ್ಥಿಕ ಸಶಕ್ತೀಕರಣಕ್ಕೆ ಪ್ರಮುಖ ಆಧಾರಸ್ತಂಭಗಳಾಗಿವೆ. ನೂತನವಾಗಿ ಆಯ್ಕೆಯಾದ ಅಧ್ಯಕ್ಷ-ಉಪಾಧ್ಯಕ್ಷರು ರೈತಪರ ಚಿಂತನೆಯೊಂದಿಗೆ ಸಂಘವನ್ನು ಮುನ್ನಡೆಸಬೇಕು. ಪಾರದರ್ಶಕ ಆಡಳಿತ, ಸಮಯೋಚಿತ ಸಾಲ ವಿತರಣೆ ಮತ್ತು ಸದಸ್ಯರ ಹಿತ ಕಾಯುವ ಕಾರ್ಯಗಳಿಗೆ ಆದ್ಯತೆ ನೀಡಬೇಕು ಎಂದು ಧಾರವಾಡ ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ್ ಹೇಳಿದರು.

ಅವರು ಮುಂಡರಗಿ ತಾಲೂಕಿನ ಬಿದರಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾಗಿ ಶ್ರೀಕಾಂತಗೌಡ ಪಾಟೀಲ, ಉಪಾಧ್ಯಕ್ಷರಾಗಿ ದ್ಯಾಮಣ್ಣ ಹರ್ಲಾಪುರ ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಆಡಳಿತ ಮಂಡಳಿಯವರನ್ನು ಸನ್ಮಾನಿಸಿ ಮಾತನಾಡಿದರು.

ಜಿ.ಪಂ ಮಾಜಿ ವಿರೋಧ ಪಕ್ಷದ ನಾಯಕ ಹೇಮಗಿರೀಶ ಹಾವಿನಾಳ್ ಮಾತನಾಡಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬು. ನೂತನ ಅಧ್ಯಕ್ಷ-ಉಪಾಧ್ಯಕ್ಷರು ರಾಜಕೀಯ ಭೇದ ಮರೆತು, ಎಲ್ಲ ಸದಸ್ಯರನ್ನು ಒಟ್ಟಿಗೆ ತೆಗೆದುಕೊಂಡು ಸಂಘದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಹೇಳಿದರು.

ಮುಖಂಡರಾದ ಹೇಮಂತಗೌಡ ಪಾಟೀಲ್, ಆನಂದಗೌಡ ಪಾಟೀಲ ಮಾತನಾಡಿ, ಸಹಕಾರ ಕ್ಷೇತ್ರದಲ್ಲಿ ಏಕತೆ ಮತ್ತು ವಿಶ್ವಾಸ ಅತೀ ಮುಖ್ಯ. ಸಂಘದ ಅಭಿವೃದ್ಧಿಗೆ ಎಲ್ಲ ನಿರ್ದೇಶಕರು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ರೈತರ ಸಮಸ್ಯೆಗಳಿಗೆ ಸ್ಪಂದಿಸಿ, ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸುವ ಜವಾಬ್ದಾರಿ ನೂತನ ಪದಾಧಿಕಾರಿಗಳ ಮೇಲಿದೆ ಎಂದರು.

ಈ ಸಂದರ್ಭದಲ್ಲಿ ಚುನಾವಣಾ ಅಧಿಕಾರಿ ಸಿ.ಕೆ. ಲಮಾಣಿ, ಕೆಸಿಸಿ ಬ್ಯಾಂಕ್ ನಿರೀಕ್ಷಕ ಕೆ.ಬಿ. ದೊಡ್ಡಮನಿ, ಮುಖ್ಯ ಕಾರ್ಯನಿರ್ವಾಹಕ ಷಣ್ಮುಖ ಬಾಳಿಕಾಯಿ, ಬಿದರಹಳ್ಳಿ, ಮುಂಡವಾಡ, ವಿಠಲಾಪುರ ಗ್ರಾಮದ ಹಿರಿಯರು, ರೈತ ಮುಖಂಡರು, ಸಂಘದ ಹಿರಿಯ ಸದಸ್ಯರು, ರೈತರು ಇದ್ದರು.

## ಮತದಾರರಾದ ನಾವು ಮತಿವಂತರಾಗಿರಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರಾದ ನಾವು ಯಾವುದೇ ಆಸೆ-ಆಮಿಷಕ್ಕೆ ಒಳಗಾಗದೇ, ಜಾಗೃತಿಯಿಂದ, ಪ್ರಜ್ಞೆಯಿಂದ ಯೋಗ್ಯ ವ್ಯಕ್ತಿಯನ್ನು ಜನಪ್ರತಿನಿಧಿಯಾಗಿ ಆಯ್ಕೆ ಮಾಡಿದಾಗ ಮಾತ್ರ ನಮ್ಮ ಮತದಾನದ ಹಕ್ಕು ಮತ್ತು ಕರ್ತವ್ಯವನ್ನು ಸುವ್ಯವಸ್ಥಿತವಾಗಿ ನಿರ್ವಹಿಸಿದಂತಾಗುತ್ತದೆ. ಮತದಾರರಾದ ನಾವು ಮತಿವಂತರಾಗಿ ನಮ್ಮ ಮತವನ್ನು ಯೋಗ್ಯ ವ್ಯಕ್ತಿಗೆ ಚಲಾಯಿಸಿದರೆ ಮಾತ್ರ ನಾವು ಭವ್ಯ ಭಾರತವನ್ನು ನಿರ್ಮಾಣ ಮಾಡಲು ಸಾಧ್ಯ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.



ಅವರು ಸನ್ಮಾರ್ಗ ಪದವಿಪೂರ್ವ ಮಹಾ ವಿದ್ಯಾಲಯದಲ್ಲಿ ಜರುಗಿದ 16ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ನಡೆದ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ದೇಶ ಪ್ರಗತಿ ಪಥದತ್ತ ಸಾಗಿದೆಯೆಂದರೆ ಮತ ಚಲಾಯಿಸುವ ಕರ್ತವ್ಯದಲ್ಲಿ ಸಾರ್ವಜನಿಕರು ಅತ್ಯಂತ ಪ್ರಬುದ್ಧರಾಗಿದ್ದಾರೆಂದೇ ಅರ್ಥ. ಆದ್ದರಿಂದ ನಮ್ಮ ಅಳಿವು-ಉಳಿವಿನ ಪ್ರಶ್ನೆಯಾಗಿರುವ ಪ್ರಜಾಪ್ರಭುತ್ವದ ಸರಕಾರ ಸರಿಯಾಗಿ ಕಾರ್ಯ ನಿರ್ವಹಿಸಬೇಕೆಂದರೆ ಮತದಾರರಾದ ನಾವು ಪ್ರಬುದ್ಧರಾದಾಗ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ಪ್ರತಿ ಚುನಾವಣೆಯಲ್ಲಿ ನಾವು ನಿಷ್ಪಕ್ಷಪಾತವಾಗಿ ಯೋಗ್ಯ, ಅರ್ಹ, ದೇಶಪ್ರೇಮಿಗೆ ಮತದಾನ ಮಾಡೋಣ ಎಂದು ಆಶಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡುತ್ತಾ, ಒಂದು ಸರಕಾರದ ನಡೆ-ನುಡಿ, ಕಾರ್ಯಕ್ಷಮತೆ, ದಕ್ಷತೆ ನಿಂತಿರುವುದೇ ನಾವು ಚುನಾವಣೆಯಲ್ಲಿ ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡಿ ಕಳಿಸುವುದರ ಮೇಲೆ ಅವಲಂಬಿತವಾಗಿದೆ. ನಾವು ಆಯ್ಕೆಮಾಡಿದ ವ್ಯಕ್ತಿ ಯೋಗ್ಯನಿದ್ದರೆ, ಯೋಗ್ಯ ರೀತಿಯಲ್ಲಿ ಕಾರ್ಯನಿರ್ವಹಿಸಿ, ದೇಶದ ಪ್ರಗತಿಗೆ ಕಾರಣನಾಗುತ್ತಾನೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತಾಧಿಕಾರಿಗಳಾದ ಎಮ್.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ಪುನೀತ ದೇಶಪಾಂಡೆ ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್ ಉಪಸ್ಥಿತರಿದ್ದರು. ಪ್ರೊ. ಸುಮಂಗಲಾ ಪಾಟೀಲ ಸ್ವಾಗತಿಸಿದರು, ಪ್ರೊ. ಪೂಜಾ ಕಾತರಕಿ ವಂದಿಸಿದರು. ಪ್ರೊ. ಪರಶುರಾಮ ಕೊಟ್ನಿಕಲ್ ಪ್ರತಿಜ್ಞಾ ವಿಧಿ ಬೋಧಿಸಿದರು.

### ರುಚಿಕರ ಉಪಹಾರ, ಮಧ್ಯಾಹ್ನದ ಊಟ | ವ್ಯವಸ್ಥಿತ ವಿತರಣೆಗೆ ತೃಪ್ತರಾದ 1.35 ಲಕ್ಷಕ್ಕೂ ಅಧಿಕ ಜನ

# ಎಲ್ಲವೂ ಅಚ್ಚುಕಟ್ಟು; ರುಚಿಕರ ಊಟದಿಂದ ತೃಪ್ತರಾದ ಸಾರ್ವಜನಿಕರು!



ಜನಸಂದಣಿ ಹೆಚ್ಚಿದ್ದರೂ ಸಹ ಯಾವುದೇ ರೀತಿಯ ಗೊಂದಲ ಉಂಟಾಗದಂತೆ ಪೊಲೀಸ್ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದರು. ಒಟ್ಟಾರೆ ಭಾರೀ ಜನಸಾಗರದ ನಡುವೆಯೂ ಆಹಾರ ವ್ಯವಸ್ಥೆಯನ್ನು ಅತ್ಯುತ್ತಮವಾಗಿ, ಅಚ್ಚುಕಟ್ಟಾಗಿ ನಿರ್ವಹಿಸಿದ ಸಹಾಯಕ ಪೊಲೀಸ್ ಆಯುಕ್ತ ಮಂಜುನಾಥ ಬಳಗಾನೂರಮಠ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ನಿಗಮದ ಕಾರ್ಯಪಾಲಕ ಅಭಿಯಂತರ ಪ್ರಸನ್ನಕುಮಾರ, ಜವಾಹರ ಜೋಗಿ, ಚೇತನಕುಮಾರ ಅವರ ನೇತೃತ್ವದಲ್ಲಿ ಸಮರ್ಥವಾಗಿ ಹಾಗೂ ಶಿಸ್ತುಬದ್ಧವಾಗಿ ನಿರ್ವಹಿಸಲಾಯಿತು.



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಐತಿಹಾಸಿಕ ಕಾರ್ಯಕ್ರಮದಲ್ಲಿ 2 ಲಕ್ಷಕ್ಕೂ ಅಧಿಕ ಜನಸ್ತೋಮ ಭಾಗವಹಿಸಿತ್ತು. ಸಮಾರಂಭಕ್ಕೆ ಆಗಮಿಸಿದ್ದ ಸಾರ್ವಜನಿಕರಿಗೆ ರುಚಿ-ಶುಚಿಯಾದ ಊಟ, ಉಪಹಾರದ ವ್ಯವಸ್ಥೆ ಮಾಡಲಾಗಿತ್ತು.

ಕಾರ್ಯಕ್ರಮಕ್ಕೆ ಆಗಮಿಸಿದ್ದವರಿಗೆ ಶಿಸ್ತುಬದ್ಧವಾಗಿ ಆಹಾರ ವಿತರಣೆ ವ್ಯವಸ್ಥೆಗೆ ವ್ಯಾಪಕ ಸಿದ್ಧತೆ ಮಾಡಲಾಗಿತ್ತು. ರುಚಿಕರವಾದ ಉಪಹಾರ ಹಾಗೂ ಮಧ್ಯಾಹ್ನದ ಊಟವನ್ನು ಶಿಸ್ತುಬದ್ಧವಾಗಿ ವಿತರಣೆ ಮಾಡಲಾಯಿತು. ಭಾರೀ ಜನಸಂದಣಿ ಇದ್ದರೂ ಸಹ, ಬೆಳಿಗ್ಗೆ 30 ಸಾವಿರಕ್ಕೂ ಅಧಿಕ ಜನರಿಗೆ ಉಪಹಾರ ವಿತರಿಸಲಾಯಿತು.

ಊಟ, ಉಪಹಾರ ವಿತರಣೆಗೆ ಒಟ್ಟು 124 ಕೌಂಟರ್‌ಗಳನ್ನು ಸ್ಥಾಪಿಸಲಾಗಿತ್ತು. ಬೆಳಗಿನ ಉಪಹಾರವಾಗಿ 30 ಸಾವಿರ ಜನರಿಗೆ ಉಪ್ಪಿಟ್ಟು ವಿತರಣೆ ಮಾಡಲಾಯಿತು. ನಂತರ ಮಧ್ಯಾಹ್ನದ ಊಟವಾಗಿ ಪಲಾವ್, ಮೊಸರನ್ನ, ಮೈಸೂರು ಪಾಕ್ ಹಾಗೂ ಸೇರುವಾ ವಿತರಿಸಲಾಯಿತು. ಒಟ್ಟು 1.50 ಲಕ್ಷಕ್ಕೂ ಹೆಚ್ಚು ಜನರಿಗೆ ಊಟದ ವ್ಯವಸ್ಥೆ ಕಲ್ಪಿಸಲಾಗಿತ್ತು. ಇದಲ್ಲದೆ, 2 ಲಕ್ಷ ಜನರಿಗೆ ವಾಟರ್ ಬಾಟಲ್ ವ್ಯವಸ್ಥೆ ಮಾಡಲಾಗಿತ್ತು.

ಉಪಹಾರ, ಊಟದ ಸಿದ್ಧತೆಗಾಗಿ 300 ಜನ, ಊಟದ ವಿತರಣೆಗಾಗಿ 200 ಸಿಬ್ಬಂದಿ ಹಾಗೂ ಸ್ವಚ್ಛತಾ ಕಾರ್ಯಕ್ಕೆ 150 ಕಾರ್ಮಿಕರನ್ನು ನಿಯೋಜಿಸಲಾಗಿತ್ತು. ಊಟದ ನಂತರ ಜನರಿಗೆ ಕೈ ತೊಳೆಯುವ ವ್ಯವಸ್ಥೆಗೆ 20 ನೀರಿನ ಟ್ಯಾಂಕರ್‌ಗಳನ್ನು ನಿಲ್ಲಿಸಲಾಗಿತ್ತು. ಆಹಾರ ವಿತರಣೆಯಲ್ಲಿ ಶುದ್ಧತೆ ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಲಾಗಿತ್ತು. ಅಡಿಗೆ ತಯಾರಿಕೆ, ಊಟ ಬಡಾವಣೆ ಮತ್ತು ಸ್ವಚ್ಛತಾ ಕಾರ್ಯಗಳು ವಿವಿಧ ವಿಭಾಗದ ಕಾರ್ಮಿಕರ ಸಮನ್ವಯದಿಂದ ನಡೆದವು.

ಅದ್ಭುತವಾದ ಕಾರ್ಯಕ್ರಮ ಮತ್ತು ರುಚಿಕರವಾದ ಊಟದಿಂದ ತೃಪ್ತರಾದ ಸಾರ್ವಜನಿಕರು, ಆಯೋಜಕರು ನಿರ್ವಹಿಸಿದ ಕಾರ್ಯವನ್ನು ಮನದುಂಬಿ ಶ್ಲಾಘಿಸಿದರು.

## ಪಶು ಆಸ್ಪತ್ರೆಗೆ ಬೆಂಕಿ; ಹಾನಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಪಶು ಆಸ್ಪತ್ರೆಯಲ್ಲಿ ಶುಕ್ರವಾರ ಸಾಯಂಕಾಲ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, ಆಸ್ಪತ್ರೆಯಲ್ಲಿನ ಪಿಠೋಪಕರಣಗಳು ಹಾಗೂ ಔಷಧಿಗಳು ಬೆಂಕಿಗೆ ಆಹುತಿಯಾಗಿವೆ. ಅಗ್ನಿಶಾಮಕ ದಳದವರು ಸಮಯಕ್ಕೆ ಸರಿಯಾಗಿ ಸ್ಥಳಕ್ಕೆ ಆಗಮಿಸಿ ಬೆಂಕಿಯನ್ನು ಆರಿಸಿದ್ದಾರೆ. ಘಟನೆಗೆ ನಿಖರವಾದ ಕಾರಣ ತಿಳಿದುಬಂದಿಲ್ಲ.

ಶುಕ್ರವಾರ ಸಾಯಂಕಾಲ ಏಕಾಏಕಿ ತಾಲೂಕು ಪಶು ಆಸ್ಪತ್ರೆಯ ಮಧ್ಯ ಭಾಗದ ಕಟ್ಟಡ ಬೆಂಕಿಯಿಂದ ಹೊತ್ತಿ ಉರಿಯುತ್ತಿರುವುದನ್ನು ಕಂಡ ಸಾರ್ವಜನಿಕರು ಗುಂಪುಗೂಡಿ ಬೆಂಕಿ ನಂದಿಸಲು ಪ್ರಯತ್ನಿಸಿದ್ದಾರೆ. ಆದರೆ ಪಶು ಆಸ್ಪತ್ರೆಯ ಮಧ್ಯ ಭಾಗದ ಕೊಠಡಿಯು ಕಟ್ಟಿಗೆಯ ಮೇಲ್ಛಾವಣಿಯಿಂದ ಕೂಡಿದ್ದರಿಂದ ಬೆಂಕಿ ಬಹುಬೇಗನೆ ಹಬ್ಬಲು ಪ್ರಾರಂಭಿಸಿತು. ಇದ್ದರಿಂದ ಸಾರ್ವಜನಿಕರು ತುರ್ತಾಗಿ ಅಗ್ನಿ ಶಾಮಕ ಕಚೇರಿ ಕರೆ ಮಾಡಿರುವುದಾಗಿ ವಿಷಯ ತಿಳಿಸಿದ್ದು, ಆ ಸಮಯಕ್ಕೆ ಬೆಂಕಿಯ ಪ್ರಮಾಣ ಹೆಚ್ಚಾಗಿ ಕಟ್ಟಡವನ್ನು ಆವರಿಸಿಕೊಂಡಿತ್ತು. ನಂತರ ಅಗ್ನಿಶಾಮಕ ಸಿಬ್ಬಂದಿ ಬೆಂಕಿಯನ್ನು ಆರಿಸಿದ್ದಾರೆ.

## ಸುಭಾಷ್ ಚಂದ್ರ ಬೋಸ್ ಜನ್ಮ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸುಭಾಷ ಚಂದ್ರ ಬೋಸ್ ವೀರ ಸೇನಾನಿಯಾಗಿದ್ದರು. ನೇತಾಜಿ ಸುಭಾಷ ಚಂದ್ರ ಬೋಸ್ ಜನ್ಮ ದಿನವನ್ನು ಪರಾಕ್ರಮ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಹೇಳಿದರು.

ಅವರು ಪಟ್ಟಣದ ರೇಣುಕಾ ಯಲ್ಲಮ್ಮಾ ದೇವಸ್ಥಾನದಲ್ಲಿ ಪತಂಜಲಿ ಯೋಗ ಸಮಿತಿ ವತಿಯಿಂದ ಸುಭಾಷ ಚಂದ್ರ ಬೋಸ್ ಅವರ ಜನ್ಮ ದಿನಾಚರಣೆ ನಿಮಿತ್ತ ಪರಾಕ್ರಮ ದಿನಾಚರಣೆ ಕಾರ್ಯಕ್ರಮದಲ್ಲಿ ಬೋಸ್‌ರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಬ್ರಿಟಿಷರ ವಿರುದ್ಧ ಮೊದಲ ಸೇನಾನಿಯಾಗಿ ಹೊರಾಡುವ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟವರು ಸುಭಾಷ ಚಂದ್ರ ಬೋಸ್. ಇಂತಹ ಮಹನೀಯರ ಆದರ್ಶಗಳನ್ನು ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.




## ಸುಚಿರಾಯು ಆಸ್ಪತ್ರೆಗೆ ಭೇಟಿ ನೀಡಿ, ಗಾಯಾಳುಗಳ ಆರೋಗ್ಯ ವಿಚಾರಿಸಿದ ಸಿಎಂ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಶನಿವಾರ ಮಂಟೂರು ರಸ್ತೆಯಲ್ಲಿ ಕಟೌಟ್ ಅಳವಡಿಸುತ್ತಿದ್ದಾಗ, ಆಕಸ್ಮಿಕವಾಗಿ ಕಟೌಟ್ ಬಿದ್ದು ಮೂವರು ಜನ ಗಾಯಗಳಾಗಿ ನಗರದ ಸುಚಿರಾಯು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮಾಹಿತಿ ತಿಳಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ವಸತಿರಹಿತರಿಗೆ ನೂತನ ಮನೆಗಳ ವಿತರಣೆ ಕಾರ್ಯಕ್ರಮದ ನಂತರ, ಹುಬ್ಬಳ್ಳಿ ಸುಚಿರಾಯು ಆಸ್ಪತ್ರೆಗೆ ಭೇಟಿ ನೀಡಿದರು.

ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳಾದ ಬ್ಯಾಹಟ್ಟಿಯ ಶಂಕರ ಹಡಪದ (28), ಹುಬ್ಬಳ್ಳಿಯ ಶಾಂತಾ ಕ್ಯಾರಕಟ್ಟಿ ( 60) ಮತ್ತು ಧಾರವಾಡದ ಲಕ್ಷ್ಮಿ ನಗರದ ಮಂಜುನಾಥ (33) ಅವರನ್ನು

ಮುಖ್ಯಮಂತ್ರಿಗಳು ಭೇಟಿ ಮಾಡಿ, ಆರೋಗ್ಯ ವಿಚಾರಿಸಿದರು. ಘಟನೆಯ ಕುರಿತು ವಿಷಾದ ವ್ಯಕ್ತಪಡಿಸಿದ ಅವರು, ಗಾಯಾಳುಗಳು ಸಂಪೂರ್ಣ ಗುಣಮುಖರಾಗುವವರೆಗೆ ಉಚಿತವಾಗಿ ಅಗತ್ಯವಾದ ಉತ್ತಮ ಚಿಕಿತ್ಸೆ, ಔಷಧಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್, ಸಮಾಜ ಕಲ್ಯಾಣ ಸಚಿವರಾದ ಡಾ.ಎಚ್.ಸಿ.ಮಹಾದೇವಪ್ಪ, ವಸತಿ ಸಚಿವರಾದ ಜಮೀರ ಅಹ್ಮದ ಖಾನ್, ಆಹಾರ ಸಚಿವರಾದ ಕೆ.ಎಚ್.ಮುನಿಯಪ್ಪ, ವಿಧಾನ ಪರಿಷತ್ ಸರಕಾರಿ ಮುಖ್ಯ ಸಚೇಕರಾದ ಸಲೀಂ ಅಹ್ಮದ,

ಶಾಸಕರಾದ ಪ್ರಸಾದ ಅಬ್ಬಯ್ಯ, ಎನ್.ಎಚ್.ಕೋನರಡ್ಡಿ, ಪ್ರಭಾರ ಜಿಲ್ಲಾದಿಕಾರಿ ಭುವನೇಶ ಪಾಟೀಲ, ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಂ ಹೊನಕೇರಿ ಹಾಗೂ ಸುಚಿರಾಯು ಆಸ್ಪತ್ರೆಯ ತಜ್ಞ ವೈದ್ಯರು, ಸಿಬ್ಬಂದಿಗಳು, ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

## ಉತ್ಖನನ ಕಾರ್ಯಕ್ಕೆ ಸಂಪೂರ್ಣ ಬೆಂಬಲ

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ಖನನ ನಡೆಯುತ್ತಿರುವ ಪ್ರದೇಶಕ್ಕೆ ಶಾಸಕ ಸಿ.ಸಿ. ಪಾಟೀಲ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸ್ಥಳದಲ್ಲಿ ಕಲ್ಲಿನ ಅವಶೇಷಗಳು ಪತ್ತೆಯಾಗಿದ್ದು, ಉತ್ಖನನ ಕಾರ್ಯ ಮುಂದುವರೆದಿದೆ ಎಂದು ಅವರು ತಿಳಿಸಿದರು.

ಉತ್ಖನನ ಕಾರ್ಯಕ್ಕೆ ಸಂಪೂರ್ಣ ಬೆಂಬಲ ನೀಡಲಾಗುವುದು. ಈ ಕುರಿತು ಉಸ್ತುವಾರಿ ಸಚಿವರೊಂದಿಗೆ ಚರ್ಚೆ ನಡೆಸಿ ಮುಂದಿನ ಕ್ರಮಗಳ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ಆದರೆ, ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.



ಸಂಸದ ಪಿ.ಸಿ ಗದ್ದಿಗೌಡರ್ ಜನವರಿ 26ರಂದು ಗದಗಕ್ಕೆ ಭೇಟಿ ನೀಡಲಿದ್ದಾರೆ. ರಿತ್ತಿ ಕುಟುಂಬಕ್ಕೆ ನಿವೇಶನ ನೀಡಲಾಗಿದ್ದು, ಮನೆ ಕಟ್ಟಲು ಸಹಾಯ ನೀಡಲಾಗುವುದು. ಸ್ಥಳಾಂತರ ಕುರಿತು ಚರ್ಚೆ ಬೇಡ, ಇದರಿಂದ ಜನ ಭಯಭೀತರಾಗಿದ್ದಾರೆ ಎಂದು ಸಿ.ಸಿ. ಪಾಟೀಲ್ ಅಭಿಪ್ರಾಯಪಟ್ಟರು.

ಜಿ ರಾಮ್‌ಜಿ ಯೋಜನೆ ಪರಿಣಾಮಕಾರಿ ಯೋಜನೆಯಾಗಿದ್ದು, ಹಿಂದಿನ 100 ದಿನಗಳ ಉದ್ಯೋಗವನ್ನು 125 ದಿನಗಳಿಗೆ ಹೆಚ್ಚಿಸಲಾಗಿದೆ. ಶಾಲಾ ಕಟ್ಟಡ, ಅಂಗನವಾಡಿ ಕಟ್ಟಡ ಹಾಗೂ ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳು ವಿಕಸಿತ್ ಭಾರತ್ ಯೋಜನೆಯಡಿ ನಡೆಯುತ್ತಿವೆ. ಕೇಂದ್ರ ಸರ್ಕಾರ ಹೆಚ್ಚಿನ ಅನುದಾನ ಒದಗಿಸಲಿದೆ ಎಂದು ಹೇಳಿದರು.

ಹುಬ್ಬಳ್ಳಿಯಲ್ಲಿ ಮೈಸೂರು ದಸರಾ ಮಾದರಿಯ ಶೃಂಗಾರ ಕಾರ್ಯ ನಡೆಯುತ್ತಿದೆ. ಮೊದಲ ಹಂತದಲ್ಲಿ 1 ಲಕ್ಷ 30 ಸಾವಿರ ಮನೆಗಳನ್ನು ನೀಡಲಾಗುತ್ತಿದೆ ಎಂದು ಹೇಳಲಾಗುತ್ತಿದೆ. 2023ರಲ್ಲಿ ನರಗುಂದದಲ್ಲಿ 500 ಮನೆಗಳಿಗೆ ತಾವೇ ಅಡಿಗಲ್ಲು ಹಾಕಿದ್ದು, ಈಗಾಗಲೇ 290 ಮನೆಗಳು ಪೂರ್ಣಗೊಂಡಿವೆ.

ಉದ್ಘಾಟನೆ ಕಾರ್ಯಕ್ರಮ ನಡೆಸಬೇಕಿತ್ತು, ಆದರೆ ಸಿಎಂ ಉದ್ಘಾಟನೆಗೂ ಮುನ್ನ ಬೇಡ ಎಂದು ತಾವು ಕೈಬಿಟ್ಟಿರುವುದಾಗಿ ಹೇಳಿದರು.

## ಉಚಿತ ಆರೋಗ್ಯ ತಪಾಸಣಾ ಶಿಬಿರ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಅಕ್ಷಯ ಆಯುರ್ಧಾಮ ಹಿರೇಮಠ ನ್ಯಾಚುರಲ್ಸ್ ವತಿಯಿಂದ ರಥಸಪ್ತಮಿಯ ಅಂಗವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಜ. 25ರಂದು ಹಮ್ಮಿಕೊಳ್ಳಲಾಗಿದೆ.

ವಿವೇಕಾನಂದ ನಗರದ ಸಾಯಿಬಾಬಾ ದೇವಾಲಯದ ಹತ್ತಿರದ ಅಕ್ಷಯ ಆಯುರ್ಧಾಮದಲ್ಲಿ ಸಂಧಿವಾತ, ಕತ್ತು ನೋವು, ಆರ್ಥರೈಟಿಸ್, ಡಿಸ್ಕ್ ಸಂಬಂಧಿಸಿದ ಕಾಯಿಲೆಗಳು, ಬೊಜ್ಜು, ಸಕ್ಕರೆ ರೋಗ, ನರ ದೌರ್ಬಲ್ಯ, ಚರ್ಮರೋಗಗಳಾದ ಸೋರಿಯಾಸಿಸ್, ಇಸುಬು, ಕಜ್ಜಿ, ಸ್ತ್ರೀರೋಗಗಳಾದ ಬಂಜೆತನ, ಪಿಸಿಓಡಿ, ಬಿಳಿಮುಟ್ಟು, ಮುಟ್ಟಿನ ತೊಂದರೆಗಳು, ಥೈರಾಯಿಡ್ ಸಂಬಂಧಿತ ಕಾಯಿಲೆಗಳು, ಅಲರ್ಜಿ, ಅಸ್ತಮಾ ಸೇರಿದಂತೆ ವಿವಿಧ ರೋಗಗಳಿಗೆ ಉಚಿತ ತಪಾಸಣೆ ನಡೆಸಲಾಗುವದು. ಶಿಬಿರದಲ್ಲಿ ನಾಡಿಪರೀಕ್ಷೆ, ರಕ್ತದೊತ್ತಡ, ರಕ್ತದಲ್ಲಿನ ಸಕ್ಕರೆ ಪ್ರಮಾಣ, ದೇಹಭಾರ ಸೂಚ್ಯಾಂಕ ( ಬಿಎಂಎಐ), ಎಲುಬು ಸಾಂದ್ರತೆ ಪರೀಕ್ಷೆ ಮುಂತಾದವುಗಳನ್ನು ಉಚಿತವಾಗಿ ನಡೆಸಲಾಗುವದು. ಶಿಬಿರದಲ್ಲಿ ನಾಡಿನ ಖ್ಯಾತ ಆಯುರ್ವೇದ ತಜ್ಞ ಡಾ. ಮಹೇಶ ಹಿರೇಮಠ, ಡಾ. ಸೌಮ್ಯಶ್ರೀ ಹಿರೇಮಠ ಮುಂತಾದ ವೈದ್ಯರ ತಂಡ ಪಾಲ್ಗೊಳ್ಳಲಿದೆ. ಆಸಕ್ತರು ಶಿಬಿರದ ಪ್ರಯೋಜನ ಪಡೆಯಲು-9964869498 ,9019555835 ಸಂಖ್ಯೆಗೆ ಸಂಪರ್ಕಿಸಲು ಕೋರಲಾಗಿದೆ.

## ನಕಾರಾತ್ಮಕ ಪರಿಣಾಮ ಕಡಿಮೆ ಮಾಡಲು ಸಾಮಾಜಿಕ ಮಾಧ್ಯಮ ನಿಯಂತ್ರಣ ಅಗತ್ಯ: ಕೈಲಾಶ್ ಸತ್ಯಾರ್ಥಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ ಕೈಲಾಶ್ ಸತ್ಯಾರ್ಥಿ ಅವರು ಅಪ್ರಾಪ್ತರಿಗೆ ಸಾಮಾಜಿಕ ಮಾಧ್ಯಮದ ನಿಯಂತ್ರಣ ನಿರ್ಧಾರವನ್ನು ಬೆಂಬಲಿಸಿದ್ದಾರೆ. 'ಇದರ ನಕಾರಾತ್ಮಕ ಪರಿಣಾಮವನ್ನು ಕಡಿಮೆ ಮಾಡಲು, ಸಕಾರಾತ್ಮಕವಾಗಿ ನೈತಿಕ ಮೌಲ್ಯಗಳನ್ನು ಹರಡಲು ಮತ್ತು ಸಮುದಾಯಗಳನ್ನು ನಿರ್ಮಿಸಲು ಸಹಾಯ ಮಾಡುತ್ತದೆ' ಎಂದು ಹೇಳಿದ್ದಾರೆ.

ಆಸ್ಟ್ರೇಲಿಯಾ 16 ವರ್ಷದೊಳಗಿನವರಿಗೆ ಸಾಮಾಜಿಕ ಮಾಧ್ಯಮವನ್ನು ನಿಷೇಧಿಸಿದ ಹಿನ್ನೆಲೆಯಲ್ಲಿ ಸತ್ಯಾರ್ಥಿ ಅವರ ಈ ಹೇಳಿಕೆ ಬಂದಿದೆ. "ವಿಶ್ವದ ಎಲ್ಲಿಯೂ ಸಾಮಾಜಿಕ ಮಾಧ್ಯಮವನ್ನು ನಿಷೇಧಿಸಬಾರದು, ನಿಯಂತ್ರಿಸಬೇಕು ಎಂದು ನಾನು ಭಾವಿಸುತ್ತೇನೆ. ಏಕೆಂದರೆ, ಸಾಮಾಜಿಕ ಮಾಧ್ಯಮದ ಮೂಲಕ ಬಹಳಷ್ಟು ದ್ವೇಷ, ಹಿಂಸೆ, ಬಹಳಷ್ಟು ಸುಳ್ಳು ಮತ್ತು ನಕಲಿ ವಿಷಯಗಳನ್ನು ಪ್ರಚಾರ ಮಾಡಲಾಗುತ್ತದೆ" ಎಂದು ಹೈದರಾಬಾದ್ ಸಾಹಿತ್ಯ ಉತ್ಸವದಲ್ಲಿ ಮಾತನಾಡಿದರು.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ:ನಅಪ್ರಾಗಬೆ/ಭೂಬ-(69)/2025-26/1275 ದಿನಾಂಕ: 23.001.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಆಶೀಶ ಭಗವಾನದಾಸ ತೊಶ್ನಿವಾಲ ಹಾಗೂ ಇತರರು ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ **ಕಾಯ್ದೆ 1961 ರ ಕಲಂ 69(3)** ರಂತೆ ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಗದಗ | 146/*/16 | 00ಎಕರೆ-07ಗುಂಟೆ 10ಆಣೆ | ಉದ್ಯಾನವನ/ ಬಯಲುಜಾಗೆ | ವಾಣಿಜ್ಯ |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/558/ದೇಶಪಾಂಡೆಪಬ್ಲಿಸಿಟಿ/2025-26

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ-(69)/2025-26/1274 ದಿನಾಂಕ:23.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಆಶೀಶ ಭಗವಾನದಾಸ ತೊಶ್ನಿವಾಲ ಹಾಗೂ ಇತರರು ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 69(3)**ರಂತೆ ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಗದಗ | 146/*/18 | 00ಎಕರೆ-07ಗುಂಟೆ10ಆಣೆ | ಉದ್ಯಾನವನ/ ಬಯಲುಜಾಗೆ | ವಾಣಿಜ್ಯ |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/564/ದೇಶಪಾಂಡೆಪಬ್ಲಿಸಿಟಿ/2025-26

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda-gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1277 ದಿನಾಂಕ: 23.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ವಸಂತಕುಮಾರ ಬಾಬುಲಾಲ ಜೈನ್, ಶ್ರೀಮತಿ ರೇಖಾ ಕೋಂ ಮುಖೇಶ ಜೈನ್ ಹಾಗೂ ಶ್ರೀಮತಿ ಜಯಶ್ರೀ ಕೋಂ ಲಿಂಗನಗೌಡ ಪರ್ವತಗೌಡ್ರ** ಇವರು ಸಾ॥ ಗದಗ ಈ ಕೆಳಕಂಡ ಜಮೀನುಗಳನ್ನು ಭೂಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆ ಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)ರಂತೆ** ಭೂಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂಉಪಯೋಗ | ಅರ್ಜಿದಾರರು ಬಯಸಿರುವ ಭೂಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 392/*/7 | 01ಎಕರೆ-19ಗುಂಟೆ-08ಆಣೆ | ಕೃಷಿ ವಲಯ | ವಸತಿ |
| 02 | ಗದಗ | 392/*/8 | 01ಎಕರೆ-19ಗುಂಟೆ-08ಆಣೆ | | |
| | | | ಒಟ್ಟು ಕ್ಷೇತ್ರ: 02ಎ-38ಗುಂ-16ಆಣೆ | | |

ವಾ.ಸಾ.ಇ/ಗದಗ/568/ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka